ಸಂಪುಟ : 8 ಸಂಚಿಕೆ : 205 ಪುಟ : 4 ಬೆಲೆ : 3.00 ಬುಧವಾರ ಸಪ್ಟೆಂಬರ್ 20, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 205 Pages : 4 Price : 3.00 Wednesday September 20, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದ ವಿವಿಧ ಭಾಗಗಳಿಗೆ ಸೆಪ್ಟೆಂಬರ್ 20 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ :** ವಾರ್ಡ್ ನಂ. 24, 26ರಲ್ಲಿ ಮಕಾನಗಲ್ಲಿ ಉಡಚಮ್ಮನಗುಡಿ ಲೈನ್, ಅಬ್ಬಿಗೇರಿ ಕಂಪೌಂಡ್ ಲೈನ್ ಸಾಲಮನೆ, ಕಮ್ಮಾರಸಾಲ, ತೆಗ್ಗಿನಪೇಟೆ, ಭಜಂತ್ರಿ ಓಣಿ, ಚಿಕ್ಕಲಗಾರ ಓಣಿ, ಹಳೆ ಕಚೇರಿ, ಡಂಬಳ ಲೈನ್, ಗುಜ್ಜರ್ ಬಸ್ತಿ ಬಲಭಾಗ, ವಾರ್ಡ್ ನಂ. 21, 22, 23ರಲ್ಲಿ ಜಂತ್ಲಿಯವರ ಲೈನ್, ಹೊಸ ಲೈನ್, ಹಳೆ ಲೈನ್, ಕುಂಬಾರ ಓಣಿ, ದ್ಯಾಮನಕಟ್ಟಿ, ಗಂಜಿಬಸವೇಶ್ವರ ಸರ್ಕಲ್, ಕಮತರ ಲೈನ್, ಬನ್ನಿಕಾಳಮ್ಮನ ಲೈನ್, ವಿಭೂತಿ ಓಣಿ, ಹನುಮಾನಗರಡಿ, ದ್ರೌಪದಿ ಬಾಯಿ ಲೈನ್, ಉಳಿದ ಕೆಲವು ಭಾಗಗಳು,

ವಾರ್ಡ್ ನಂ. 27, 30ರಲಿ ಫಾರ್ಮ್ ಓಣಿ, ಕಾಶಿ ವಿಶ್ವನಾಥನಗರ, ಅಸೂಟಿಯವರ ಲೈನ್, ಸಂಕಣ್ಣವರ ಲೈನ್, ಹನುಮಂತದೇವರ ಗುಡಿ ಲೈನ್, ಮಾಳಿಕಟ್ಟಿ ಸರ್ ಗುಡಿ ಲೈನ್, ವಿ.ಆರ್.ಎಲ್.ಆಫೀಸ್ ಲೈನ್, ಟಿ.ವಿ.ಎಸ್. ಶೋರೂಮ್, ಮುತ್ತಿನಪೆಂಡಿಮಠ ಲೈನ್, ಅಬ್ಬಗೇರಿ ಲೇಔಟ್, ಪಾರ್ಶಿಯವರ ಲೈನ್,

ವಾರ್ಡ್ ನಂ. 22ರಲಿ ಅಂಬೇಡ್ಕರ್ ನಗರ, ತಾಜನಗರ, ವಾರ್ಡ್ ನಂ. 1ರಲ್ಲಿ ಎಸ್.ಎಮ್. ಕೃಷ್ಣ ನಗರ

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಲು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಕ್ಷಾ ಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರು "ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗಿದೆ. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರು ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಲಿಂಕ್ https://sw.kar.nic.in ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಅಕ್ಟೋಬರ್ 10 ರವರೆಗೆ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ನಾಡು, ನುಡಿ ಸಂಸ್ಕೃತಿ ಬಿಂಬಿಸುವ ವಿಶಿಷ್ಟ ಲಾಂಛನ ಬಳಸಲು ಲಾಂಛನದ ಮಾದರಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣವಾಗಿ 50 ವರ್ಷ ಪೂರ್ಣಗೊಳ್ಳಲಿರುವ ಸುವರ್ಣ ಮಹೋತ್ಸವದ ಸುಸಂದರ್ಭದಲ್ಲಿ **ಕರ್ನಾಟಕ ಸಂಭ್ರಮ 50 ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ** ಎಂಬ ಶೀರ್ಷಿಕೆಯಡಿ ರಾಜ್ಯಾದ್ಯಂತ ವರ್ಷಪೂರ್ತಿ ವೈವಿಧ್ಯಮಯವಾಗಿ, ವರ್ಣಮಯವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಇದಕ್ಕೊಂದು ವಿಶೇಷ ಮೆರುಗು ನೀಡಲು ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಉದ್ದೇಶಿಸಿದೆ.

ಕಾರ್ಯಕ್ರಮದ ಸಂಭ್ರಮವನ್ನು ಹೆಚ್ಚಿಸಲು ಕನ್ನಡ ನಾಡು-ನುಡಿ-ಸಂಸ್ಕೃತಿಯನ್ನು ಬಿಂಬಿಸುವ ವಿಶಿಷ್ಟವಾದ ಲಾಂಛನ(ಲೋಗೊ)ವನ್ನು ಬಳಸಲು ತೀರ್ಮಾನಿಸಲಾಗಿದ್ದು, ಆಸಕ್ತರಿಂದ ಸುಂದರವಾದ ಲಾಂಛನ(ಲೋಗೊ)ದ ಮಾದರಿಗಳನ್ನು ಆಹ್ವಾನಿಸಲಾಗಿದೆ.

ಆಯ್ಕೆಯಾಗುವ ಮಾದರಿ ಲಾಂಛನಕ್ಕೆ ರೂ 25,000/- ಗಳ ಬಹುಮಾನವನ್ನು ನಿಗದಿಪಡಿಸಲಾಗಿದೆ.

ಲಾಂಛನ(ಲೋಗೊ)ದ ಮಾದರಿಯನ್ನು ಕಳುಹಿಸಲು ದಿನಾಂಕ ಸೆಪ್ಟೆಂಬರ್ 20 ರಿಂದ 30ರವರೆಗೆ ಅವಕಾಶವಿದೆ. ಆಸಕ್ತರು ಈ ಕುರಿತು ಅಗತ್ಯ ಮಾಹಿತಿಗಳನ್ನು ಇಲಾಖೆಯ ಜಾಲತಾಣ https://www.kannadasiri.karnataka.gov.in ದಲ್ಲಿ ಪಡೆಯಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಶಾಂತಿ ಕದಡುವವರಿಗೆ ಕಠಿಣ ಕ್ರಮ ನಿಶ್ಚಿತ: ಡಿವೈಎಸ್‌ಪಿ ಎಂ.ಬಿ ಸಂಕದ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗಣೇಶ ಹಬ್ಬದ ಹಿನ್ನಲೆಯಲ್ಲಿ ಡಿವೈಎಸ್‌ಪಿ ಎಂ.ಬಿ ಸಂಕದ, ಸಿಪಿಐ ನಾಗರಾಜ ಮಾಡಳ್ಳಿ ಅವರ ನೇತೃತ್ವದಲ್ಲಿ ಮಂಗಳವಾರ ಸಂಜೆ ಪಥಸಂಚಲನ(ರೂಟ್ ಮಾರ್ಚ್) ನಡೆಸಲಾಯಿತು.

ಪಟ್ಟಣ ಸೇರಿದಂತೆ ಗ್ರಾಮಗಳಲ್ಲಿ ಗಣೇಶೋತ್ಸವ ಆಚರಣೆ ಪ್ರಾರಂಭವಾಗಿದ್ದು, ಮುಂಜಾಗ್ರತಾ ಕ್ರಮವಾಗಿ ಜನರಲ್ಲಿ ಜಾಗೃತಿ ಮೂಡಿಸುವ ಮತ್ತು ಯಾವುದೇ ಅಹಿತಕರ ಘಟನೆಗಳು ನಡೆಯದಿರಲೆಂಬ ಉದ್ದೇಶದಿಂದ ಎಚ್ಚರಿಕೆ ವಹಿಸಲು ಪೊಲೀಸ್ ಇಲಾಖೆ ಪಥಸಂಚಲನ ಏರ್ಪಡಿಸಿ, ಸಾರ್ವಜನಿಕರಲ್ಲಿ ಧೈರ್ಯ ತುಂಬುವ ಕಾರ್ಯ ನಡೆಸಿತು.

ಕೆಎಸ್‌ಆರ್‌ಪಿ, ಡಿಎಆರ್ ಸಿಬ್ಬಂದಿಗಳು, ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ಠಾಣಾ ಸಿಬ್ಬಂದಿಗಳು, ಹೋಮ್‌ಗಾರ್ಡ್ಸ್ ಇದ್ದರು. ಪಟ್ಟಣದ ಪಂಪ ಸರ್ಕಲ್‌ನಿಂದ ಪ್ರಾರಂಭವಾದ ರೂಟ್ ಮಾರ್ಚ್ ಕೋರ್ಟ್ ಸರ್ಕಲ್, ▸▸3ನೇ ಪುಟಕ್ಕೆ



### ಜಿಲ್ಲಾಡಳಿತ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಚಿವ ಎಚ್.ಕೆ.ಪಾಟೀಲ

# ಬರ ಪರಿಸ್ಥಿತಿ ನಿಭಾಯಿಸಲು ಸಕಲ ಸಿದ್ಧತೆ



■ವಿಜಯಸಾಕ್ಷಿ ಸುದ್ದಿ, ಗದಗ

ಈಗಾಗಲೇ ರಾಜ್ಯದ 191 ತಾಲೂಕುಗಳನ್ನು ಸರ್ಕಾರ ಬರಪೀಡಿತ ತಾಲೂಕುಗಳೆಂದು ಘೋಷಣೆ ಮಾಡಿದೆ. ಗದಗ ಜಿಲ್ಲೆಯ 7 ತಾಲೂಕುಗಳ ಪೈಕಿ ಮುಂಡರಗಿ ಹೊರತುಪಡಿಸಿ ಉಳಿದ 6 ತಾಲೂಕುಗಳನ್ನು ತೀವ್ರ ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗಿದ್ದು, ಬರಪರಿಸ್ಥಿತಿ ಸಮರ್ಪಕವಾಗಿ ನಿಭಾಯಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಮಂಗಳವಾರದಂದು ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಗದಗ ಜಿಲ್ಲೆಯ 6 ತಾಲೂಕುಗಳನ್ನು ಈಗಾಗಲೇ ತೀವ್ರ ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗಿದ್ದು, ಮುಂಡರಗಿ ತಾಲೂಕಿನ ಅಧ್ಯಯನ ಇನ್ನೂ ನಡೆದಿದೆ. ಅಧ್ಯಯನ ವರದಿ ನಂತರ ಘೋಷಣೆ ಮಾಡಲಾಗುವುದು ಎಂದರು. ▸▸3ನೇ ಪುಟಕ್ಕೆ

### ಕೇಂದ್ರ ಸರ್ಕಾರ ರಾಜಕೀಯ ಪರಿಹಾರ ನೀಡಲಿ

ಕಾವೇರಿ ವಿಚಾರದಲ್ಲಿ ಈಗಾಗಲೇ ಉಪಮುಖ್ಯಮಂತ್ರಿಗಳು ನೀರಾವರಿ ಸಚಿವರನ್ನು ಭೇಟಿ ಮಾಡಿದ್ದಾರೆ. ಸಂಸತ್ತಿನಲ್ಲಿ ಈ ವಿಷಯದ ಕುರಿತು ಚರ್ಚೆಯಾಗಿದೆ. ಮಾಜಿ ಪ್ರಧಾನಿ ದೇವೇಗೌಡ್ರ ಕೂಡಾ ಮಾತನಾಡಿದ್ದಾರೆ. ನಮ್ಮ ಮುಖ್ಯಮಂತ್ರಿ ಸಿದ್ಧರಾಮಯ್ಯ ಪತ್ರ ಬರೆದಿದ್ದಾರೆ. ಕೇಂದ್ರ ಸರ್ಕಾರ ಇದಕ್ಕೆ ರಾಜಕೀಯ ಪರಿಹಾರ ಕೊಡುವುದು ಸೂಕ್ತ ಎನ್ನುವುದು ಕೇಂದ್ರಕ್ಕೆ ಮನವರಿಕೆಯಾಗಿದೆ. ಆದರೆ ಕೇಂದ್ರ ಸರ್ಕಾರಕ್ಕೆ ಮನವರಿಕೆಯಾಗಿದ್ದರೂ ಅದಕ್ಕೆ ಅವರು ಸ್ಪಂದಿಸುತ್ತಿಲ್ಲ ಎಂದು ಸಚಿವ ಎಚ್.ಕೆ ಪಾಟೀಲ ಹೇಳಿದರು.

ಕೇಂದ್ರ ಸರ್ಕಾರ ಕೂಡಲೇ ಈ ಬಗ್ಗೆ ಸ್ಪಂದಿಸಬೇಕು. ನಮ್ಮಲ್ಲಿಯ ನೀರಿನ ಕೊರತೆ, ತಮಿಳುನಾಡಿಗೆ ಒದಗುವ ಸೌತ್ ಈಸ್ಟ್ ಮಾನ್ಸೂನ್ ಮತ್ತು ಅವರಿಗೆ ಲಭ್ಯವಿರುವ ಅಂತರ್ಜಲ ಸಂಪತ್ತು, ಅವರ ಮೆಟ್ಟೂರ ಡ್ಯಾಂನಲ್ಲಿರುವ ನೀರಿನ ಸಂಗ್ರಹ ಇವೆಲ್ಲವುಗಳನ್ನು ಗಮನಿಸಿ, ಕೇಂದ್ರ ಸರ್ಕಾರ ರಾಜಕೀಯ ಪರಿಹಾರವನ್ನು ಕೊಡಬೇಕು. ಪರಿಹಾರ ಕೊಡುವುದಕ್ಕೆ ಸೂಕ್ತವಾದ ಪ್ರಯತ್ನವನ್ನು ಪ್ರಧಾನಿ ನರೇಂದ್ರ ಮೋದಿ ಮಾಡಬೇಕು ಎಂದು ಆಗ್ರಹಿಸುತ್ತೇನೆ ಎಂದರು.

ಮೀಸಲಾತಿ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಮೀಸಲಾತಿ ವಿಷಯವಾಗಿ ನಮ್ಮ ಪಕ್ಷ ಎಷ್ಟು ವರ್ಷಗಳ ಹಿಂದೆಯೇ ಕೆಲಸ ಮಾಡಿದೆ ಎನ್ನುವುದು ದೇಶಕ್ಕೆ ಗೊತ್ತಿದೆ. ಅದರ ಬಗ್ಗೆ ಯಾರೇ ಕ್ರೆಡಿಟ್ ತೆಗೆದುಕೊಳ್ಳಲು ಸಾಧ್ಯವಿಲ್ಲ. ಕ್ರೆಡಿಟ್ ಕೊಡುವವರು ಮತದಾರರು ಮಾತ್ರ ಎನ್ನುವುದನ್ನು ತಿಳಿದುಕೊಳ್ಳಬೇಕು. ನಮ್ಮ ಪಕ್ಷ ಎಷ್ಟು ವರ್ಷಗಳಿಂದ ಮಹಿಳಾ ಮೀಸಲಾತಿಗಾಗಿ ಕಾರ್ಯ ನಿರ್ವಹಿಸಿದೆ ಎನ್ನುವುದನ್ನು ದೇಶದ ಇತಿಹಾಸ ಹೇಳುತ್ತದೆ ಎಂದು ಸಚಿವ ಎಚ್.ಕೆ ಪಾಟೀಲ ಖಾರವಾಗಿ ಪ್ರತಿಕ್ರಿಯಿಸಿದರು.

### ಸಾರ್ವಜನಿಕರ ಹಾಗೂ ವಾಹನಗಳ ಸುರಕ್ಷಿತ ಸಂಚಾರಕ್ಕೆ ಕ್ರಮ ವಹಿಸಲು ಸಚಿವ ಎಚ್.ಕೆ. ಪಾಟೀಲ ಸೂಚನೆ

# ರಸ್ತೆ ಅಭಿವೃದ್ಧಿ ಕಾಮಗಾರಿ ವಿಶೇಷ ಆಸಕ್ತಿ ವಹಿಸಿ ಪೂರ್ಣಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವಿಧಾನಸಭಾ ಕ್ಷೇತ್ರದ ವಿವಿಧ ಕಡೆಗಳಲ್ಲಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ವಿಶೇಷ ಆಸಕ್ತಿ ವಹಿಸಿ ಪೂರ್ಣಗೊಳಿಸಬೇಕೆಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರದಂದು ಗದಗ ವಿಧಾನಸಭಾ ಕ್ಷೇತ್ರದ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗದಗ ವಿಧಾನಸಭಾ ಕ್ಷೇತ್ರದ ರಸ್ತೆಗಳು ಅಲ್ಲಲ್ಲಿ ಕೆಟ್ಟು ಹೋಗಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತದೆ. ರಸ್ತೆ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು ಹಾಗೂ ನಿಗದಿತ ಸಮಯದಲ್ಲಿಯೇ ಕಾಮಗಾರಿಗಳು ಪೂರ್ಣಗೊಳ್ಳಬೇಕು. ವಿನಾಕಾರಣ ಸಂಬಂಧಿತ ಅಧಿಕಾರಿಗಳು ಕಾಮಗಾರಿ ಪೂರ್ಣಗೊಳಿಸುವಲ್ಲಿ ವಿಳಂಬ ಧೋರಣೆ ಮಾಡಿದರೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು. ಬೀದಿ ದೀಪಗಳನ್ನು ಸೂಕ್ತ ಸ್ಥಳಗಳಲ್ಲಿ ಅಳವಡಿಕೆ ಮಾಡದಿರುವ ಕಾರಣದಿಂದ ರಸ್ತೆ ದುರಸ್ತಿ ಕಾಮಗಾರಿಗೆ ತೊಂದರೆಯಾಗುತ್ತಿದೆ. ಹುಲಕೋಟಿ ಗ್ರಾಮದಲ್ಲಿ ಚರಂಡಿ ಮತ್ತು ಸಿಸಿ ರಸ್ತೆ ಕಾಮಗಾರಿ ಪೂರ್ಣಗೊಳಿಸಬೇಕು. ಈ ಕುರಿತು ಸಂಬಂಧಿತ ಅಧಿಕಾರಿಗಳು ವಿಶೇಷ ಕಾಳಜಿ ವಹಿಸಿ ಕ್ರಮವಹಿಸಬೇಕು ಎಂದರು.

ನಗರದ ಬೆಟಗೇರಿಯಿಂದ ಗದಗನ ಕರಿಯಪ್ಪ ಸರ್ಕಲ್‌ದವರೆಗೆ ಕಮಾನು ರೀತಿಯ ಬೀದಿ ದೀಪಗಳನ್ನು ಅಳವಡಿಸಲು ಕ್ರಮವಹಿಸಬೇಕು. ರಸ್ತೆ ದುರಸ್ತಿ ಕಾಮಗಾರಿಗಳ ಜೊತೆಗೆ ರಸ್ತೆಯ ಅಕ್ಕಪಕ್ಕದಲ್ಲಿ ಸಸಿಗಳನ್ನು ನಡೆಸುವ ಮೂಲಕ ನಗರದ ಸ್ವಚ್ಛತೆ ಹಾಗೂ ಸೌಂದರ್ಯೀಕರಣಕ್ಕೆ ಒತ್ತು ಕೊಡಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಭೂಮರೆಡ್ಡಿ ಸರ್ಕಲ್ ದಿಂದ ಜರ್ಮನ್ ▸▸3ನೇ ಪುಟಕ್ಕೆ

ಶಲವಡಿ-ಮುಂಡರಗಿ, ಗದಗ- ಪಾಪನಾಶಿ, ಮುಳಗುಂದ ನಾಕಾದಿಂದ ಚೆನ್ನಮ್ಮ ಸರ್ಕಲ್ ಮತ್ತು ಭೂಮರೆಡ್ಡಿ ಸರ್ಕಲ್, ಜರ್ಮನ್ ಹಾಸ್ಪಿಟಲ್‌ದಿಂದ ಬೆಟಗೇರಿಯ ಇಂಡಸ್ಟ್ರಿಯಲ್ ಎಸ್ಟೇಟ್ ರಸ್ತೆ ಕಾಮಗಾರಿ, ಬೆಟಗೇರಿಯ ತರಕಾರಿ ಮಾರುಕಟ್ಟೆಯಿಂದ ಶರಣಬಸವೇಶ್ವರ ಸ್ಕೂಲ್ ವರೆಗೆ, ಬೆಟಗೇರಿಯ ಬಸ್ ಸ್ಟ್ಯಾಂಡ್‌ನಿಂದ ಭಜಂತ್ರಿ ರೋಡ್, ಬೆಟಗೇರಿಯ ಹಾಕಿ ಸ್ಟೇಡಿಯಂ ಮುಂದುಗಡೆಯಿಂದ 1ನೇ ವಾರ್ಡ್ ಮೇನ್ ರೋಡ್, ಗಂಗಿಮಡಿ ಮೇನ್ ರೋಡ್ ನಿಂದ 16ನೇ ವಾರ್ಡ್, ವೀರನಾರಾಯಣ ದೇವಸ್ಥಾನದಿಂದ ಗುಜ್ಜರಬಸ್ತಿ ರಾಚೋಟೇಶ್ವರ ನಗರ, ಬನ್ನಿಮಂಟಪದಿಂದ ಕಳಸಾಪುರ ರಸ್ತೆ ಸೇರಿದಂತೆ ವಿವಿಧ ರಸ್ತೆ ಕಾಮಗಾರಿಗಳನ್ನು ನಿಗದಿತ ಕಾಲಾವಧಿಯಲ್ಲಿಯೇ ಪೂರ್ಣಗೊಳಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

## ನೀರು ಪಾಲಾದ ಬಾಲಕರ ಕುಟುಂಬಗಳಿಗೆ ತಲಾ 2 ಲಕ್ಷ ಪರಿಹಾರ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಗದಗನ ರಹಮತ್ ನಗರದ ಬಳಿಯ ರೈಲ್ವೆ ಹಳಿಯ ಪಕ್ಕದಲ್ಲಿ ಇರುವ ಹೊಂಡದಲ್ಲಿ ನೀರು ಪಾಲಾದ ಇಬ್ಬರು ಬಾಲಕರ ಕುಟುಂಬಕ್ಕೆ ತಲಾ 2 ಲಕ್ಷ ರೂಪಾಯಿಗಳ ಚೆಕ್‌ಗಳನ್ನು ಮಂಗಳವಾರದಂದು ವಿತರಿಸಿದರು.



ಗದಗನ ರೆಹಮತ್ ನಗರದ ಬಳಿಯ ರೈಲ್ವೆ ಹಳಿಯ ಪಕ್ಕದಲ್ಲಿ ಇರುವ ಹೊಂಡದಲ್ಲಿ ಜಾನುವಾರು ಮೇಯಿಸಲು ಹೋಗಿದ್ದ ಇಬ್ಬರು ಬಾಲಕರು ನೀರು ಪಾಲಾದ ಘಟನೆ ಆಗಸ್ಟ್ 15 ರಂದು ನಡೆದಿತ್ತು. ರೆಹಮತ ನಗರದ 12 ವರ್ಷದ ಮಹಮದ್ ಅಮೀನ್ ಹಾಗೂ 14 ವರ್ಷದ ಸಂತೋಷ ಕುಂಬಾರ ಎಂಬ ಬಾಲಕರಿಬ್ಬರು ಸಾವನ್ನಪ್ಪಿದ್ದರು.

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು, ಮೃತ ಬಾಲಕರ ಕುಟುಂಬಕ್ಕೆ ಮುಖ್ಯ ಮಂತ್ರಿಗಳ ಪರಿಹಾರ ನಿಧಿಯಿಂದ ತಲಾ 2 ಲಕ್ಷ ರೂ.ಗಳ ಪರಿಹಾರ ಮೊತ್ತವನ್ನು ನೀಡುವ ಬರವಸೆ ನೀಡಿದ್ದರು. ಅಲ್ಲದೇ ಅಂದು ಮೃತ ಬಾಲಕರ ಮನೆಗಳಿಗೆ ತೆರಳಿ ಕುಟುಂಬ ಸದಸ್ಯರಿಗೆ ಸಾಂತ್ವನ ಸಹ ಹೇಳಿದ್ದರು. ಪರಿಹಾರ ಚೆಕ್ ವಿತರಣೆ ವೇಳೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಕೃಷ್ಣ ಪರಾಪೂರ, ಪ್ರಭು ಬುರಬುರೆ, ಬಿ.ಬಿ.ಅಸೂಟಿ, ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಮಹಮ್ಮದ್ ಶಾಲಗಾರ ಸೇರಿದಂತೆ ಮತ್ತಿತರರು ಇದ್ದರು.

## ಆಸ್ಪತ್ರೆ ನಿರ್ಮಾಣಕ್ಕೆ ಅನುದಾನ ಒದಗಿಸುವಂತೆ ಸಚಿವರಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣದಲ್ಲಿ 100 ಹಾಸಿಗೆಗಳ ಆಸ್ಪತ್ರೆಯ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವ ಕುರಿತು ಹಾಗೂ ಶಿರಹಟ್ಟಿಯಲ್ಲಿ ಹೆಸ್ಕಾಂ ಉಪವಿಭಾಗೀಯ ಕಚೇರಿಯನ್ನು ಮಂಜೂರು ಮಾಡುವಂತೆ ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಸಚಿವ ಎಚ್.ಕೆ ಪಾಟೀಲ ಅವರಿಗೆ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಶಿರಹಟ್ಟಿಯಲ್ಲಿ 2011-12ನೇ ಸಾಲಿನಲ್ಲಿ 100 ಹಾಸಿಗೆಗಳ ಆಸ್ಪತ್ರೆ ಮಂಜೂರಾಗಿದ್ದು, 20-21ರಲ್ಲಿ ಜಮೀನು ಖರೀದಿ ಸಹ ಆಗಿದೆ. 2023ರ ಮಾರ್ಚ್ ತಿಂಗಳ ಬಜೆಟ್‌ನಲ್ಲಿ ಅನುದಾನ ಮಂಜೂರು ಮಾಡಲಾಗಿದ್ದು, ಕಾರಣಾಂತರಗಳಿಂದ ಸರ್ಕಾರ ಅನುದಾನ ಹಿಂಪಡೆದಿದೆ. ತಾಲೂಕಿನಲ್ಲಿ ರೋಗಿಗಳ ಅನುಕೂಲಕ್ಕಾಗಿ ಶೀಘ್ರವೇ ಕಟ್ಟಡ ಕಾಮಗಾರಿಗೆ ಅನುದಾನ ಒದಗಿಸಬೇಕು ಎಂದರು.

ತಾಲೂಕಾ ಕೇಂದ್ರವಾಗಿದ್ದರೂ ಸಹ ಅನೇಕ ವರ್ಷಗಳಿಂದ ವಿದ್ಯುತ್ ಉಪವಿಭಾಗೀಯ ಕಚೇರಿ ಇಲ್ಲದಿರುವುದರಿಂದ ರೈತರು ಮತ್ತು ಸಾರ್ವಜನಿಕರು ಯಾವುದೇ ಕೆಲಸಕ್ಕೆ ಲಕ್ಷ್ಮೇಶ್ವರ ಉಪವಿಭಾಗೀಯ ಕಚೇರಿಗೆ ಅಲೆದಾಡುತ್ತಿದ್ದಾರೆ. ಆದ್ದರಿಂದ ಶಿರಹಟ್ಟಿಯಲ್ಲೇ ಉಪವಿಭಾಗೀಯ ಕಚೇರಿ ಮಂಜೂರು ಮಾಡಬೇಕೆಂದು ಮನವಿಯಲ್ಲಿ ತಿಳಿಸಿದ್ದಾರೆ.

ಪರಮೇಶ ಪರಬ, ಇಸಾಕ ಆದ್ರಳ್ಳಿ, ಮಂಜುನಾಥ ಘಂಟಿ, ಅಲ್ಲಾಭಕ್ಷಿ ನಗಾರಿ, ಹೊನ್ನಪ್ಪ ಶಿರಹಟ್ಟಿ, ಆನಂದ ಕೋಳಿ ಉಪಸ್ಥಿತರಿದ್ದರು.

## ಇಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಯುವ ಸಬಲೀಕರಣ ಮತು ಕ್ರೀಡಾ ಇಲಾಖೆ ಇವರ ಸಹಯೋಗದಲ್ಲಿ ಸೆಪ್ಟೆಂಬರ್ 20 ರಂದು ಬುಧವಾರ ಬೆಳಿಗ್ಗೆ 9-30 ಗಂಟೆಗೆ ನಗರದ ಕೆ.ಎಚ್.ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವ ಬಿ.ನಾಗೇಂದ್ರ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ▸▸3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

ಬ್ರಹ್ಮನನ್ನು ತಿಳಿದವನಿಗೆ ಸ್ವರ್ಗ ಹುಲ್ಲಿನ ಸಮಾನ.
ಶೂರನಿಗೆ ಪ್ರಾಣ ಹುಲ್ಲಿನ ಸಮಾನ.
–ಸುಭಾಷಿತ

## ಸಂಪಾದಕೀಯ

# ಮಹಿಳಾ ಮೀಸಲು ಶಕ್ತಿ ಅನಾವರಣ

ಹೊಸ ಸಂಸತ್ ಭವನದಲ್ಲಿ ನಡೆದ ಮೊಟ್ಟ ಮೊದಲ ವಿಶೇಷ ಅಧಿವೇಶನದಲ್ಲಿ ಮಹಿಳಾ ಮೀಸಲಾತಿಯ ಶಕ್ತಿ ಅನಾವರಣಗೊಂಡಿದೆ. ಸುದೀರ್ಘ 27 ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ಮಹಿಳಾ ಮೀಸಲಾತಿ ಮಸೂದೆಗೆ ಮಂಗಳವಾರ ಅಂಕಿತ ಬಿದ್ದಿದೆ.

ಈ ವಿಶೇಷ ಅಧಿವೇಶನ ಯಾವ ಕಾರಣಕ್ಕಾಗಿ ಕರೆಯಲಾಗಿದೆ ಎನ್ನುವ ಕುರಿತು ಗೌಪ್ಯತೆ ಕಾಪಾಡಿಕೊಳ್ಳಲಾಗಿತ್ತು. ಅನೇಕ ಬಿಜೆಪಿ ಸಂಸದರಿಗೂ ಈ ಬಗ್ಗೆ ಮಾಹಿತಿ ಇರಲಿಲ್ಲ. ಅದರಲ್ಲೂ ಮಹಿಳಾ ಮೀಸಲಾತಿ ವಿಷಯ ಚರ್ಚೆಯ ಊಹಾಪೋಹಗಳ ಪಟ್ಟಿಯಲ್ಲೂ ಇರಲಿಲ್ಲ. ಅಂತಿಮವಾಗಿ ಅಧಿವೇಶನದ ಮೊದಲ ದಿನವೇ ಪ್ರಮುಖ ನಿರ್ಣಯ ಕೈಗೊಂಡಿದ್ದು, ವಿರೋಧ ಪಕ್ಷಗಳಿಗೆ ಭಾರೀ ಹೊಡೆತ ಬಿದ್ದಂತಾಗಿದೆ.

ಪ್ರಧಾನಿ ನರೇಂದ್ರ ಮೊದಿ ಈ ಹೊಸ ಕಾಯಿದೆಗೆ ನಾರಿ ಶಕ್ತಿ ವಂದನ್ ಕಾಯ್ದೆ ಎಂದು ಹೆಸರಿಸಿದರು. ಈ ಕಾಯ್ದೆ ಜಾರಿಯಾದ ನಂತರ ಅಂದರೆ ಶೇ. 33ರಷ್ಟು ಮಹಿಳಾ ಮೀಸಲಾತಿ ಕಲ್ಪಿಸಿದ ನಂತರ ಸಂಸತ್‌ನಲ್ಲಿ ಮಹಿಳಾ ಸಂಸದರ ಸಂಖ್ಯೆ 81 ರಿಂದ 181ಕ್ಕೆ ಏರಿಕೆಯಾಗಲಿದೆ. ಅಲ್ಲದೇ ಈ ಕಾಯಿದೆ 15 ವರ್ಷಗಳವರೆಗೆ ಜಾರಿಯಲ್ಲಿರಲಿದ್ದು, ಭವಿಷ್ಯದಲ್ಲಿ ಇದನ್ನು ಮುಂದುವರಿಸುವ ಅಧಿಕಾರ ಕೇಂದ್ರ ಸರಕಾರಕ್ಕೆ ಇರುವುದು ಈ ಕಾಯಿದೆ ವಿಶೇಷತೆಯಾಗಿದೆ.

ಆ ಮೂಲಕ 2024ರ ಲೋಕಸಭೆ ಚುನಾವಣೆಯಿಂದಲೇ ಈ ಕಾಯಿದೆ ಜಾರಿಯಾಗಲಿದ್ದು, ಭವಿಷ್ಯದ ಸಂಸತ್ ಚುನಾವಣೆಯಲ್ಲಿ ಮಹಿಳಾ ಆಕಾಂಕ್ಷಿಗಳಿಗೆ ಬಹುದೊಡ್ಡ ವೇದಿಕೆ ಸಿಕ್ಕಂತಾಗಲಿದೆ. ಅಲ್ಲದೇ ಭವಿಷ್ಯದ ಕೇಂದ್ರ ಸರಕಾರದಲ್ಲಿ ಮಹಿಳೆಯರು ಮತ್ತಷ್ಟು ಹೆಚ್ಚಿನ ಸ್ಥಾನಮಾನಗಳನ್ನು ಗಿಟ್ಟಿಸಿಕೊಳ್ಳುವುದು ನಿಶ್ಚಿತವಾಗಿದೆ.

ಸರಿಸುಮಾರ 27 ವರ್ಷಗಳ ಹಿಂದೆಯೇ ಮಹಿಳಾ ಮೀಸಲಾತಿ ಜಾರಿಗೆ ಯತ್ನ ನಡೆದಿತ್ತು. ಆದರೆ ಅನೇಕ ರಾಜಕೀಯ ಕಾರಣಗಳಿಂದ ಅದು ನನೆಗುದಿಗೆ ಬಿದ್ದಿತ್ತು. ಮಹಿಳಾ ಸಬಲೀಕರಣದ ಬಗ್ಗೆ ಗಂಟೆಗಟ್ಟಲೇ ಭಾಷಣ ಮಾಡಿದ ಅನೇಕ ರಾಜಕೀಯ ನೇತಾರರೇ ಪರೋಕ್ಷವಾಗಿ ಮಹಿಳಾ ಮೀಸಲು ಕಾಯಿದೆಗೆ ವಿರೋಧ ವ್ಯಕ್ತಪಡಿಸಿದ್ದರು. ಆದರೆ ಅಂತಿಮವಾಗಿ ಮಹಿಳಾ ಮೀಸಲು ಮಸೂದೆಗೆ ಅಂಗೀಕಾರ ದೊರೆತಿದೆ. ಮಹಿಳಾ ಸಬಲೀಕರಣ ವಿಷಯದಲ್ಲಿ ಕೇಂದ್ರ ಸರಕಾರ ತೆಗೆದುಕೊಂಡಿರುವ ಈ ನಿರ್ಧಾರ ಅತ್ಯಂತ ಸ್ವಾಗತಾರ್ಹವಾಗಿದೆ.

**ದಿ. ಸರಾಫ್ ಅಸೋಸಿಯೇಷನ್ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಸಚಿವ ಎಚ್.ಕೆ ಪಾಟೀಲ**

# ಚಿನ್ನದ ವ್ಯಾಪಾರಿಗಳು, ಗ್ರಾಹಕರ ನಡುವೆ ಅಪರಿಮಿತ ವಿಶ್ವಾಸ




ಗದಗ-ಬೆಟಗೇರಿಯ ದಿ.ಸರಾಫ ಅಸೋಸಿಯೇಷನ್‌ನ ಪದಾಧಿಕಾರಿಗಳು ವಿಶ್ವಕರ್ಮ ದಿನಾಚರಣೆಯಂದೇ ಚೇಂಬರ್ ಅಧ್ಯಕ್ಷರನ್ನು ಆಹ್ವಾನಿಸಿ, ಅವರಿಂದ ಪ್ರತಿಜ್ಞಾವಿಧಿ ಸ್ವೀಕರಿಸಿ, ಪದಗ್ರಹಣ ಮಾಡುವ ಮೂಲಕ ಹೊಸ ನಾಂದಿ ಹಾಡಿದ್ದಾರೆ ಎಂದು ಸಚಿವ ಎಚ್.ಕೆ ಪಾಟೀಲ ಪ್ರಶಂಸೆ ವ್ಯಕ್ತಪಡಿಸಿದರು. ಶ್ರೀ ಶಿವಾನಂದ ಬೃಹನ್ಮಠದ ಜಗದ್ಗುರು ಶ್ರೀ ಸದಾಶಿವಾನಂದ ಮಹಾಸ್ವಾಮಿಗಳು ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ, ಆಶೀರ್ವಚನ ನೀಡಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಚಿನ್ನದ ವಹಿವಾಟು ನಡೆಸುವ ವ್ಯಾಪಾರಿಗಳ ಮೇಲೆ ಗ್ರಾಹಕರಿಗೆ ವಿಶ್ವಾಸ ಹೆಚ್ಚು. ಈ ಕಾರಣಕ್ಕಾಗಿಯೇ ಜನ ಇದರ ಮೇಲೆ ಹೆಚ್ಚು ಹೂಡಿಕೆ ಮಾಡುತ್ತಿದ್ದಾರೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲ ಹೇಳಿದರು.

ನಗರದ ಹುಬ್ಬಳ್ಳಿ ರಸ್ತೆಯ ಶ್ರೀ ವಿಠಲಾರೂಢ ಸಮುದಾಯ ಭವನದಲ್ಲಿ ರವಿವಾರ ಆಯೋಜಿಸಿದ್ದ ಗದಗ-ಬೆಟಗೇರಿಯ ದಿ.ಸರಾಫ ಅಸೋಸಿಯೇಷನ್‌ನ 2023-25ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಮೊದಲು ಜನ ಭೂಮಿ ಮೇಲೆ ಹೂಡಿಕೆ ಮಾಡಿ, ಅದನ್ನು ಸಂಪತ್ತಾಗಿ ಪರಿಗಣಿಸುತ್ತಿದ್ದರು. ಇದೀಗ ಚಿನ್ನದ ಮೇಲೆ ಜನ ಹೆಚ್ಚು ಹೂಡಿಕೆ ಮಾಡುತ್ತಿದ್ದು, ಇದು ನಿಜವಾದ ಸಂಪತ್ತಾಗಿದೆ. ಇತ್ತೀಚೆಗೆ ಸರ್ಕಾರ 'ಬಿಐಎಸ್' ಹಾಲ್‌ಮಾರ್ಕ್ ಕಡ್ಡಾಯ ಮಾಡಿದ್ದು, ಪರಸ್ಪರರ ವಿಶ್ವಾಸ ಮತ್ತಷ್ಟು ಹೆಚ್ಚಳ ಆಗುವಂತೆ ಮಾಡಿದೆ ಎಂದರು.

ಚುನಾವಣೆಯಲ್ಲಿ ಅಸೋಸಿಯೇಷನ್ ಅಧ್ಯಕ್ಷ ಅರುಣ ಟಿ.ವರ್ಣೇಕರ, ನೂತನ ಅಧ್ಯಕ್ಷ ಸಿದ್ದಲಿಂಗೇಶ ಡಿ.ಮುರಶಿಳ್ಳಿನ, ಯುವ ಮುಖಂಡ ಪ್ರವೀಣ ವಾರಕರ ಸೇರಿ ಬಹುತೇಕ ಎಲ್ಲ ಸರಾಫ ವರ್ತಕರು ಅಷ್ಟೇ ಅಲ್ಲ, ಅವರಲ್ಲಿ ಕೆಲಸ ಮಾಡುವ ಕಾರ್ಮಿಕರೂ ಸೇರಿ ಎಲ್ಲರೂ ನನ್ನ ಗೆಲುವಿಗೆ ವಿಶೇಷವಾಗಿ ಶ್ರಮಿಸಿದ್ದಾರೆ. ಇದಕ್ಕೆ ಪೂರಕವಾಗಿ ಸಭೆ ನಡೆಸಿ, ಬೆಂಬಲಿಸಿದ್ದಾರೆ ಎಂದು ಬಣ್ಣಿಸಿ, ಅದಕ್ಕಾಗಿ ಕೃತಜ್ಞತೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಗದಗ-ಬೆಟಗೇರಿಯ ದಿ.ಸರಾಫ ಅಸೋಸಿಯೇಷನ್‌ನ 2023-25ನೇ ಸಾಲಿನ ನೂತನ ಪದಾಧಿಕಾರಿಗಳಿಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ಮಧುಸೂದನ ಪುಣೇಕರ ಅವರು ಅಧಿಕಾರ ಭೋದನೆ ಮಾಡಿದರು.

ಅಸೋಸಿಯೇಷನ್ ನಿಕಟಪೂರ್ವ ಅಧ್ಯಕ್ಷ ಅರುಣ ಟಿ.ವರ್ಣೇಕರ ಅವರು ಅಧ್ಯಕ್ಷತೆ ವಹಿಸಿದ್ದರು. ನೂತನ ಅಧ್ಯಕ್ಷ ಸಿದ್ದಲಿಂಗೇಶ ಡಿ.ಮುರಶಿಳ್ಳಿನ, ಉಪಾಧ್ಯಕ್ಷರಾದ ಪರಶುರಾಮ ಖಟವಟೆ, ನಾಗರಾಜ ಮೇರವಾಡೆ, ಕಾರ್ಯದರ್ಶಿ ಸಂಜಯ ಸಿ.ರಾಯ್ಕರ, ಸಹ ಕಾರ್ಯದರ್ಶಿ ಅಮಿತ ಎ.ಪಾಲನಕರ, ಖಜಾಂಚಿ ಮೋಹನ ಆರ್.ಪವಾರ ಸೇರಿ ಅನೇಕರು ವೇದಿಕೆಯಲ್ಲಿದ್ದರು.

ಕಾರ್ಯಕ್ರಮದಲ್ಲಿ ಕಾರ್ಯಕಾರಿಣಿ ಮಂಡಳಿ ಸದಸ್ಯರಾದ ರಾಜು ವಾಯ್.ಬದಿ, ಪ್ರವೀಣ ವಾರಕರ, ಕಿರಣ ಭಾಂಡಗೆ, ಈರಣ್ಣ ಹುಬ್ಬಳ್ಳಿ, ಸಂತೋಷ ಕುರ್ಡೇಕರ, ಆಶೀಶ ಜೈನ್, ವಿಷ್ಣು ಜಾಧವ, ನಿಖಿಲ ಕಾತರಕಿ, ರಾಘವೇಂದ್ರ ರೇವಣಕರ, ಪ್ರವೀಣ ಕಾಟವಾ, ಅವಿನಾಶ ಬಿ.ಪಾಟೀಲ ಸೇರಿ ಅಸೋಸಿಯೇಷನ್‌ನ ಎಲ್ಲ ಸದಸ್ಯರು ಭಾಗವಹಿಸಿದ್ದರು.

ನೂತನ ಅಧ್ಯಕ್ಷ ಸಿದ್ದಲಿಂಗೇಶ ಡಿ.ಮುರಶಿಳ್ಳಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಕ್ರಮ ಶೇಠ ಪ್ರಾರ್ಥಿಸಿದರು. ಪ್ರಕಾಶ ಸ್ವಾಗತಿಸಿದರು.

# ಬರಪೀಡಿತ ತಾಲೂಕು ಘೋಷಣೆಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ರಾಜ್ಯದಲ್ಲಿ ಈ ವರ್ಷ ತೀವ್ರತರವಾದ ಬರಗಾಲ ಆವರಿಸಿದೆ. ಬೆಳೆಗಳು ಶೇ.75ರಷ್ಟು ನಾಶವಾಗಿದೆ. ಈ ಹಿನ್ನೆಲೆಯಲ್ಲಿ ಮುಂಡರಗಿ ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸಿ ಎಕರೆಗೆ 25 ಸಾವಿರ ರೂ. ಪರಿಹಾರ ಮತ್ತು ಬೆಳೆ ವಿಮೆ ಮಾಡಿಸಿದ ರೈತರಿಗೆ ಮಧ್ಯಂತರ ಪರಿಹಾರವನ್ನು ನೀಡಬೇಕು ಎಂದು ಜೆಡಿಎಸ್ ಪಕ್ಷದ ವತಿಯಿಂದ ತಹಸೀಲ್ದಾರರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕಾಧ್ಯಕ್ಷ ಜಿ.ಕೆ ಕೊಳ್ಳಿಮಠ, ಹನುಮಂತಪ್ಪ ಕಂಚಗಾರ, ಮಂಜುನಾಥ ದೋಡ್ಡಮನಿ, ರಫೀಕ್ ಹವಾಲ್ದಾರ್ ಮೌಲಹುಸೇನ್ ತಾಂಬೂಲಿ, ದೇವರಡ್ಡಿ ರಾಜೂರ, ಈರಪ್ಪ ಶಿದ್ನೇಕೊಪ್ಪ, ಚನವೀರಯ್ಯ ಸಾಲಿಮಠ, ಉಮೇಶ್ ಹಿರೇಮಠ ಇದ್ದರು.

# ನಾವೆಲ್ಲರೂ ಮೋದಿಯವರ ಕೈ ಬಲಪಡಿಸೋಣ: ಡಾ. ಚಂದ್ರು ಲಮಾಣಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಧಾನಿ ನರೇಂದ್ರ ಮೋದಿಯವರ 73ನೇ ಜನ್ಮ ದಿನಾಚರಣೆ ಅಂಗವಾಗಿ ಶಾಸಕ ಡಾ.ಚಂದ್ರು ಲಮಾಣಿ ಅವರು ಪಟ್ಟಣದ ಶಾಂತಿಧಾಮ ವೃದ್ಧಾಶ್ರಮದಲ್ಲಿನ ಹಿರಿಯ ನಾಗರಿಕರು ಮತ್ತು ಸರ್ಕಾರಿ ಆಸ್ಪತ್ರೆಯಲ್ಲಿನ ರೋಗಿಗಳಿಗೆ ಹಾಲು-ಹಣ್ಣು ವಿತರಿಸಿದರು.

ನಂತರ ಮಾತನಾಡಿದ ಅವರು, ಎಲ್ಲ ಕ್ಷೇತ್ರಗಳಲ್ಲೂ ಹಿಂದುಳಿದಿದ್ದ ಭಾರತವನ್ನು ವಿಶ್ವದ ಭೂಪಟದಲ್ಲಿ ಎದ್ದು ಕಾಣುವಂತೆ ಮಾಡುವಲ್ಲಿ ನರೇಂದ್ರ ಮೋದಿಯವರ ಬಿಡುವಿಲ್ಲದ ದುಡಿಮೆಯೇ ಕಾರಣವಾಗಿದೆ. ಭಾರತವನ್ನು ವಿಶ್ವದ ನಂ.1 ರಾಷ್ಟ್ರವನ್ನಾಗಿ ಮಾಡಬೇಕು ಎಂದು ಅವರು ಕನಸು ಸಾಕಾರಗೊಳ್ಳುತ್ತಿದೆ. ಅದಕ್ಕೆ ಬರುವ ಚುನಾವಣೆಯಲ್ಲೂ ನಾವೆಲ್ಲ ಅವರ ಕೈ ಬಲಪಡಿಸೋಣ. ನರೇಂದ್ರ ಮೋದಿಯವರ ಜನ್ಮದಿನವನ್ನು ಒಂದು ತಿಂಗಳ ಶ್ರಮದಾನ ಮಾಸವನ್ನಾಗಿ ಆಚರಿಸಲು ನಿರ್ಧರಿಸಲಾಗಿದೆ. ರಕ್ತದಾನ, ಆರೋಗ್ಯ ಶಿಬಿರಗಳಂಥ ಜನಪರ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು. ಇದಕ್ಕೆ ಎಲ್ಲರ ಸಹಕಾರ ಮುಖ್ಯ ಎಂದರು.

ಶಿವಾನಂದ ಅಂಗಡಿ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಯವರ ನಿರಂತರ ಶ್ರಮದಿಂದಾಗಿ ಭಾರತ ಇಂದು ಎಲ್ಲ ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸುತ್ತಿದೆ. ಇಂಥ ಪ್ರಧಾನಿ ಇದ್ದರೆ ದೇಶ ಮತ್ತಷ್ಟು ಅಭಿವೃದ್ಧಿ ಹೊಂದಲು ಸಾಧ್ಯ ಎಂದರು.

ತಾಲೂಕು ಪ್ರಧಾನ ಕಾರ್ಯದರ್ಶಿ ಗಂಗಾಧರ ಮೆಣಸಿನಕಾಯಿ, ಎಂ.ಆರ್ ಪಾಟೀಲ, ಬಿಜೆಪಿ ನಗರ ಘಟಕದ ಅಧ್ಯಕ್ಷ ದುಂಡೇಶ ಕೊಟಗಿವೀರಯ್ಯ ಸಾಲಿಮಠ, ರಮೇಶ ಹಾಳದೋಟದ, ವಿಜಯಕುಮಾರ ಹತ್ತಿಕಾಳ, ನಂದಾ ಧರ್ಮಾಯತ, ಶಿವಯೋಗಿ ಅಂಕಲಕೋಟಿ, ವಿಜಯ ಬೂದಿಹಾಳ, ರಾಜಶೇಖರ ಶಿರಹಟ್ಟಿ, ಮಲ್ಲಿಕಾರ್ಜುನ ನೀರಾಲೋಟಿ ಮತ್ತಿತರರು ಇದ್ದರು.

# ಮೊಬೈಲ್ ಆ್ಯಪ್ ಮೂಲಕ ಬೆಳೆ ಸಮೀಕ್ಷೆ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಹಂಗಾಮಿನ 2023-24ನೇ ಸಾಲಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ಜಿಲ್ಲೆಯ ಎಲ್ಲಾ ರೈತರು ಗೂಗಲ್ ಪ್ಲೇಸ್ಟೋರ್‌ನಿಂದ 'ಖಾರೀಫ್ ಫಾರ್ಮರ್ ಕ್ರಾಪ್ ಸರ್ವೆ ಆ್ಯಪ್' ಡೌನ್‌ಲೋಡ್ ಮಾಡಿಕೊಂಡು ತಾವು ಬೆಳೆದ ಬೆಳೆಗಳ ವಿವರವನ್ನು ತಾವೇ ಸ್ವತಃ ತಮ್ಮ ಜಮೀನಿನಲ್ಲಿ ನಿಂತು ಬೆಳೆ ವಿವರವನ್ನು ದಾಖಲಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆಯ ಗದಗ ಜಿಲ್ಲಾ ರೈತ ಸಂಘದ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ವಿನಂತಿಸಿದ್ದಾರೆ.

ಕನಿಷ್ಠ ಬೆಂಬಲ ಯೋಜನೆಯಲ್ಲಿ ತಾವು ಬೆಳೆದ ಕಾಳುಗಳನ್ನು ಮಾರಾಟ ಮಾಡುವುದ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ಬೆಳೆ ನಷ್ಟ ಪರಿಹಾರ ಪಡೆಯಲು, ಪಹಣಿ ಉತಾರದಲ್ಲಿ ಬೆಳೆಯ ವಿವರಗಳನ್ನು ದಾಖಲಿಸುವುದು, ಬ್ಯಾಂಕುಗಳಲ್ಲಿ ಬೆಳೆ ಸಾಲ ಪಡೆಯುವಲ್ಲಿ ಸಹಕಾರಿಯಾಗಲಿದೆ. ಈಗಾಗಲೇ ಸರ್ಕಾರ ಗದಗ ಜಿಲ್ಲೆಯ ಆರು ತಾಲ್ಲೂಕುಗಳನ್ನು ಮುಂಗಾರು ಬರ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಿದ್ದು, ಬರ ಪರಿಹಾರ ಪಡೆಯಲು ಬೆಳೆ ಸಮೀಕ್ಷೆ ಕಡ್ಡಾಯವಾಗಿರುತ್ತದೆ ಎಂದು ರೈತರಿಗೆ ತಿಳಿಸಿದ್ದಾರೆ.



# ಮಕ್ಕಳಿಗೆ ಕುಲಕಸುಬಿನೊಂದಿಗೆ ಉತ್ತಮ ಶಿಕ್ಷಣ ಕಲ್ಪಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಂಚ ಶ್ರೇಷ್ಠ ಕುಲಕಸುಬುಗಳ ಮೂಲಕ ಜಗತ್ತಿನ ಜನರ ಬೇಡಿಕೆಗಳನ್ನು ಪೂರೈಸುತ್ತ, ಕಾಯಕವೇ ಕೈಲಾಸ ಎಂಬ ಬಸವಣ್ಣನವರ ತತ್ವದಡಿ ಬದುಕುವ ವಿಶ್ವಕರ್ಮರು ನಾಗರೀಕತೆಯ ಬೆಳವಣಿಗೆಗೆ ಕಾರಣರಾಗಿದ್ದಾರೆ ಎಂದು ಕಂದಾಯ ನಿರೀಕ್ಷಕ ಬಿ.ಎಂ ಕಾತರಾಳ ಹೇಳಿದರು.

ಅವರು ಭಾನುವಾರ ತಹಸೀಲ್ದಾರ ಕಚೇರಿಯಲ್ಲಿ ವಿಶ್ವಕರ್ಮ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಪ್ರಗತಿಶೀಲ ಸಮಾಜಕ್ಕೆ ವಿಶ್ವಕರ್ಮ ಸಮಾಜ ಬಾಂಧವರ ಕೊಡುಗೆ ಅಪಾರವಾಗಿದ್ದು, ಅವರನ್ನು ಜಾತಿ, ಧರ್ಮ ಮೀರಿ ಕಲಾರಾಧಕರಾಗಿ ಗೌರವಿಸುವುದು ಸಮಾಜದ ಕೆಲಸವಾಗಿದೆ. ವಿಶ್ವಕರ್ಮ ಸಮಾಜದವರು ಒಗ್ಗಟ್ಟನಿಂದ ಬಾಳಬೇಕು. ಮಕ್ಕಳಿಗೆ ಕುಲಕಸುಬಿನೊಂದಿಗೆ ಉತ್ತಮ ಶಿಕ್ಷಣ ಕಲ್ಪಿಸಬೇಕು ಎಂದರು.

ಈ ವೇಳೆ ವಿಶ್ವಕರ್ಮ ಸಮಾಜದ ತಾಲೂಕಾಧ್ಯಕ್ಷ ಈರಣ್ಣ ಬಡಿಗೇರ ಮಾತನಾಡಿ, ಪ್ರಸ್ತುತ ತಾಂತ್ರಿಕತೆಯ ಪ್ರಭಾವದಿಂದ ವಿಶ್ವಕರ್ಮ ಸಮಾಜದ ಕುಲಕಸುಬುಗಳಿಗೆ ಸಾಕಷ್ಟು ಪೆಟ್ಟು ಬಿದ್ದಿದೆ. ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಎಲ್ಲ ಕ್ಷೇತ್ರದಲ್ಲೂ ಹಿಂದುಳಿದಿರುವ ಸಮಾಜದ ಶ್ರೇಯೋಭಿವೃದ್ಧಿಗಾಗಿ ಸರ್ಕಾರ ಗಮನ ಹರಿಸಬೇಕು ಎಂದರು.

ಸಮಾಜದ ಮುಖಂಡರಾದ ಎಂ.ಎಂ ಸುತಾರ, ಬಾಸ್ಕರ ಸೊರಟೂರ, ಮಕರಂದ ಹುಲಬಜಾರ, ಮೌನೇಶ ಬಾಲೆ ಹೊಸೂರ, ಮನೋಹರ ಪತ್ತಾರ, ಮಾಹಾಂತೇಶ ಬಡಿಗೇರ, ರಾಮಚಂದ್ರ ಬಡಿಗೇರ, ಶ್ರೀಕಾಂತ ಪತ್ತಾರ, ಪ್ರಸನ್ನ ಬೆಂತೂರ, ಪ್ರಕಾಶ ಹುಲಬಜಾರ, ಶಿರಸ್ತೆದಾತ ರೇಣುಕಾ ಹರಿಜನ, ಪ್ರಶಾಂತ ಸನದಿ ಸೇರಿದಂತೆ ಸಿಬ್ಬಂದಿ, ಸಮಾಜ ಬಾಂಧವರು ಪಾಲ್ಗೊಂಡಿದ್ದರು.

# ಲಕ್ಕುಂಡಿ ಪ್ರಾಥಮಿಕ ಕೃಷಿ ಪತ್ತಿನ ಸಂಘದ ಸಭೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

434 ರೈತರ ಷೇರುಗಳನ್ನು ಹೊಂದಿರುವ ನಮ್ಮ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘವು ಈ ವರ್ಷ ವಿವಿಧ ಮೂಲಗಳ ವ್ಯವಹಾರದಿಂದ, ರೈತರ ಸಹಕಾರದಿಂದ 2,53,650 ರೂ.ಗಳ ಲಾಭವನ್ನು ಗಳಿಸಿದೆ ಎಂದು ಸಂಘದ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ ಹೇಳಿದರು.

ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಿಯಮಿತ ನಂ.2ರ ವಾರ್ಷಿಕ ಸರ್ವ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ ಬೆಣಕಲ್ ವಾರ್ಷಿಕ ಲೆಕ್ಕವನ್ನು ವಿವರಿಸಿದರು. ಈ ಸಂದರ್ಭದಲ್ಲಿ ಹಿರಿಯ ರೈತರಾದ ಗುರಯ್ಯ ಪತ್ರಿಮಠ, ಮೆಹಬೂಬಸಾಬ ಯರಗುಡಿ, ಗುರಪ್ಪ ಕಣವಿ, ಷಣ್ಮುಖಪ್ಪ ಮುಸ್ಕಿನಭಾವಿ, ಸಂಗಪ್ಪ ಪಾಪನಾಶಿ ಅವರನ್ನು ಸನ್ಮಾನಿಸಲಾಯಿತು.

ಸಂಘದ ನಿರ್ದೇಶಕರಾದ ಕಲ್ಲಪ್ಪ ಬೆಟಗೇರಿ, ಗವಿಶಿದ್ದಪ್ಪ ರೇವಡಿ, ಮಲ್ಲನಗೌಡ ಪಾಟೀಲ, ಶಂಕ್ರಪ್ಪ ಕುಂಬಾರ, ಅಂದಾನಯ್ಯ ಪತ್ರಿಮಠ, ಮಂಜುನಾಥ ಕರಿಯಲ್ಲಪ್ಪನವರ, ಅನ್ನಪೂರ್ಣ ಹಡಗಲಿ ಸಕ್ರಪ್ಪ ರಾಮತಾಳ ವೇದಿಕೆಯಲ್ಲಿದ್ದರು. ಕಾರ್ಯದರ್ಶಿ ಜಿ.ಬಿ ಬೆಣಕಲ್ ಸ್ವಾಗತಿಸಿದರು. ಮಂಜುನಾಥ ಗದಗಿನ ನಿರೂಪಿಸಿದರು. ಅಜ್ಜಪ್ಪಗೌಡ ಪಾಟಿಲ ವಂದಿಸಿದರು.



**ನರಸಾಪೂರದ ಖಾದಿ ನಗರದಲ್ಲಿ ನಾಗದೇವರ ಮೂರ್ತಿ ಪ್ರಾಣಪ್ರತಿಷ್ಠಾಪನೆ**

# ದೇವಸ್ಥಾನಗಳು ಸಕಾರಾತ್ಮಕ ಶಕ್ತಿ ಕೇಂದ್ರಗಳು



ವೇ.ಮೂ ಲಿಂಗಯ್ಯಶಾಸ್ತ್ರಿಗಳು ಹಿರೇಮಠ ಮಾತನಾಡಿ, ಅಡ್ನೂರು ಬೃಹನ್ಮಠದ ಪಟ್ಟದ್ದೇವರು ನಾಗದೇವರ ಮೂರ್ತಿಗೆ ಜೀವ ತುಂಬಿದ ನಂತರ ಜೀವಕಳೆ ಬಂದಿದೆ. ಭಕ್ತರು ನಿತ್ಯ ನಿರಂತರವಾಗಿ ಪೂಜೆ-ಪುನಸ್ಕಾರಗಳನ್ನು ಮುಂದುವರೆಸಿಕೊಂಡು ಸನ್ಮಾರ್ಗದಲ್ಲಿ ನಡೆಯುವಂತಾಗಲಿ ಎಂದು ಹಾರೈಸಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದಲ್ಲಿ ಪುರಾತನ ಕಾಲದಿಂದಲೂ ಸಂಸ್ಕೃತಿ, ಆಚಾರ-ವಿಚಾರ, ಪರಂಪರೆಗಳು ಮುಂದುವರೆದುಕೊಂಡು ಬಂದಿದ್ದು, ದೇವಸ್ಥಾನ, ಮಠ-ಮಂದಿರಗಳಿಗೆ, ಸಾಧು-ಸಂತರಿಗೆ, ಸ್ವಾಮೀಜಿಗಳಿಗೆ ವಿಶೇಷ ಸ್ಥಾನ ನೀಡಲಾಗಿದೆ ಎಂದು ಅಡ್ನೂರ-ರಾಜೂರ ಬೃಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ನರಸಾಪೂರ ಗ್ರಾಮದ ಖಾದಿ ನಗರದ ಶ್ರೀ ವರಸಿದ್ಧಿ ವಿನಾಯಕನ ದೇವಸ್ಥಾನದ ಆವರಣದಲ್ಲಿ ನಾಗದೇವರ ಮೂರ್ತಿ ಪ್ರಾಣಪ್ರತಿಷ್ಠಾಪನೆ, ಬನ್ನಿವೃಕ್ಷ ಹಾಗೂ ಪತ್ರಿವೃಕ್ಷ ನೆಡುವ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ದೇವರಲ್ಲಿ ನಾವು ಭಕ್ತಿಯಿಂದ ಶರಣಾದಾಗ ದೇವರು ನಮ್ಮಲ್ಲಿರುವ ಅಹಂಕಾರವನ್ನು ಸ್ವೀಕಾರ ಮಾಡುತ್ತಾನೆ. ಯಾವ ವ್ಯಕ್ತಿ ಅಹಂಕಾರ, ಮಮಕಾರವನ್ನು ಕಳೆದುಕೊಳ್ಳುತ್ತಾನೆಯೋ ಅವನು ದೊಡ್ಡವನಾಗುತ್ತಾನೆ.

ಮನುಷ್ಯ ತಾನು ನಾನು ಎಂಬ ಭಾವನೆಯನ್ನು ಬಿಟ್ಟಾಗ ಅಂದು ದೇವರಲ್ಲಿ ಸೇರುತ್ತಾನೆ. ಯಾವ ವ್ಯಕ್ತಿ ಧರ್ಮವನ್ನು ರಕ್ಷಣೆ ಮಾಡುತ್ತಾನೋ, ಅವರನ್ನು ಧರ್ಮ ರಕ್ಷಣೆ ಮಾಡುತ್ತದೆ ಎಂದರು.

ನಾಗರಿಕ ಹಿತರಕ್ಷಣಾ ಕಮೀಟಿಯ ಅಧ್ಯಕ್ಷ ಕೆ.ಎಸ್ ಹಿರೇಮಠ, ಉಪಾಧ್ಯಕ್ಷ ಎಸ್.ವಿ ಗುರ್ಲಹೊಸೂರ, ಕಾರ್ಯದರ್ಶಿ ಸಿ.ವಿ ಪವಾಡಶೆಟ್ಟರ, ಮುಖಂಡರಾದ ವಿ.ಎ ಹೊಂಬಾಳಿಮಠ, ಎಸ್.ಬಿ ಕುರ್ಲಗೇರಿ, ಪ್ರಕಾಶ ಕೆರಕನವರ ಎಂ.ಎ ಕೆಲೂರ, ಬಿ.ಎಲ್ ಹೊಸಳ್ಳಿಮಠ, ಬಿ.ಎ ಮಾನೇದ, ವಿನೋದ ಬೀಳಗಿ, ಮಹದೇವಪ್ಪ ಶಿರೋಳ, ದೇವೇಂದ್ರಪ್ಪ ಜಂತ್ಲಿ, ಬಸವರಾಜ ಕಿತ್ತೂರ, ರಾಜು ಮಲಗಾವಿ, ಹಾತಲಗೇರಿ ಗ್ರಾ.ಪಂ ಉಪಾಧ್ಯಕ್ಷೆ ನಿರ್ಮಲಾ ಕರಿಗೌಡ್ರ, ಸೌಮ್ಯ ಕೆರಕನವರ, ಶೋಭಾ ಹಿರೇಮಠ, ಲತಾ ಹಲಗತ್ತಿ, ಕಸ್ತೂರಿ ಕುಸಲಾಪೂರ ಮುಂತಾದವರಿದ್ದರು. ಶಾರದಾ ಬೀಳಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

# ಮೃಗಾಲಯಕ್ಕೆ ಅಧ್ಯಯನ ಪ್ರವಾಸ




■ ವಿಜಯಸಾಕ್ಷಿ ಸುದ್ದಿ, ಗದಗ

ಕ್ವೆಸ್ಟ್ ಫೌಂಡೇಶನ್ ಹಾಗೂ ನೂರಾನಿ ಟ್ರಸ್ಟ್ ಅರಣ್ಯ ಇಲಾಖೆಯ ಸಹಯೋಗದೊಂದಿಗೆ ಕ್ಯಾಲೆಬ್ ಶಾಲಾ ಮಕ್ಕಳಿಗಾಗಿ ಮೃಗಾಲಯದ ಅಧ್ಯಯನ ಪ್ರವಾಸವನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಪ್ಯಾರಅಲಿ ನೂರಾನಿ, ಮಕ್ಕಳು ಪ್ರತಿನಿತ್ಯ ಕಲಿಕೆಯಲ್ಲಿ ಪಾಲ್ಗೊಂಡಿರುತ್ತಾರೆ. ಅವರಿಗೆ ವಿಶ್ರಾಂತಿ ನೀಡುವ ಉದ್ದೇಶದಿಂದ, ಮಕ್ಕಳ ಮನಸ್ಸನ್ನು ಸಂತೋಷವಾಗಿರಿಸಲು ಈ ಪ್ರವಾಸವನ್ನು ಕೈಗೊಂಡಿದ್ದೇವೆ ಎಂದರು.

ಈ ಸಂದರ್ಭದಲ್ಲಿ ನಿತಿನ್ ಕುಲಕರ್ಣಿ, ಕ್ಯಾಲೆಬ್ ಸಿಬ್ಬಂದಿ ಮೌಲಾನಾ ಸಲೀಂ ಮುಯೆನಿ, ಅಸ್ರಾರ್ ಖಾದ್ರಿ, ಮುಸ್ತಫಾ ಖಾದ್ರಿ ಮತ್ತು ಜಾಫರ್ ಕಾಜಿ ಸೇರಿದಂತೆ 1ರಿಂದ 6ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ಬರ ಪರಿಸ್ಥಿತಿ ನಿಭಾಯಿಸಲು ಸಕಲ ಸಿದ್ಧತೆ

▶▶ ಮೊದಲನೇ ಪುಟದಿಂದ

ಜಿಲ್ಲೆಯಲ್ಲಿ 2,13,941 ಹೆಕ್ಟೇರ್ ಪ್ರದೇಶ ಹಾನಿಗೊಳಗಾಗಿದೆ. 1,38,898 ರೈತರು ಇದರಿಂದ ತೊಂದರೆಗೊಳಗಾಗಿದ್ದಾರೆ. ಎನ್.ಡಿ.ಆರ್.ಎಫ್. ಪ್ರಕಾರ ಹೆಕ್ಟೇರ್‌ಗೆ ಒಣಬೇಸಾಯಕ್ಕೆ 8500 ರೂ, ಹಾಗೂ ನೀರಾವರಿ ಜಮೀನಿಗೆ 17,000 ರೂ. ಹೆಕ್ಟೇರ್‌ನಂತೆ ಲೆಕ್ಕ ಮಾಡಲಾಗಿ ಜಿಲ್ಲೆಯಲ್ಲಿ ಒಟ್ಟು 215.53 ಕೋಟಿ ರೂ. ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ. 1,515.25 ಕೋಟಿ ರೂ. ನೈಜ ಹಾನಿಯಾಗಿದ್ದು ಈ ಕುರಿತು ರಾಜ್ಯ ಸರ್ಕಾರಕ್ಕೆ ಮಾಹಿತಿ ಒದಗಿಸಲಾಗಿದೆ.

ಮುಂಬರುವ ದಿನಗಳಲ್ಲಿ ಹೆಚ್ಚು ಹೆಚ್ಚು ಉದ್ಯೋಗ ಸೃಷ್ಟಿ ಮಾಡಲು ಸರ್ಕಾರದಿಂದ ಸಕಲ ಪ್ರಯತ್ನ ಮಾಡಲಾಗುತ್ತಿದೆ. ಬರಪರಿಸ್ಥಿತಿ ಸಮರ್ಪಕವಾಗಿ ನಿಭಾಯಿಸಲು ಜಾನುವಾರುಗಳಿಗೆ ಅನುಕೂಲವಾಗುವಂತೆ ಪಂಚಾಯತ್ ಮಟ್ಟದಲ್ಲಿ ಹಾಗೂ ಹೋಬಳಿ ಮಟ್ಟಗಳಲ್ಲಿ ಮೇವು ಬ್ಯಾಂಕ್ ಪ್ರಾರಂಭಿಸಲಾಗುವುದು. ಮಹಾತ್ಮಾಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ( ನರೇಗಾ) ಯೋಜನೆಯಡಿ ಇದ್ದ 100 ಮಾನವ ದಿನಗಳನ್ನು 150ಕ್ಕೆ ಹೆಚ್ಚಿಸಲಾಗುವುದು. ಇದರಿಂದ ಕೂಲಿ ಕಾರ್ಮಿಕರಿಗೆ, ಬಡವರಿಗೆ, ಉದ್ಯೋಗ ಒದಗಿಸಿ ಆರ್ಥಿಕ ಸಹಾಯ ದೊರಕಿದಂತಾಗುತ್ತದೆ ಎಂದು ಸಚಿವರು ತಿಳಿಸಿದರು.

ಬರ ಪರಿಸ್ಥಿತಿ ನಿಭಾಯಿಸುವಲ್ಲಿ ಜಿಲ್ಲೆಯ ಸಿಂಗಟಾಲೂರು ಮತ್ತು ನವಿಲು ತೀರ್ಥದಲ್ಲಿ ಅಗತ್ಯ ನೀರು ಸಂಗ್ರಹಣೆ ಮಾಡಲಾಗಿದ್ದು, ಸಂಗ್ರಹಿಸಲಾದ ನೀರನ್ನು ಕುಡಿಯಲು ಮಾತ್ರವೇ ಬಳಕೆಗೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಜಿಲ್ಲೆಯಲ್ಲಿ ಅಗತ್ಯವಿರುವ ಕಡೆಗೆ ಬೋರ್‌ವೆಲ್ ಕೊರೆಸುವ ವ್ಯವಸ್ಥೆ ಮಾಡಲಾಗುವುದು. ಒಂದು ವೇಳೆ ಜಲಸಂಪನ್ಮೂಲಗಳ ಕೊರತೆಯಿರುವ ಪ್ರದೇಶಗಳಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜಿಗೆ ಕ್ರಮ ವಹಿಸಲಾಗುವುದು ಎಂದರು.

ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಲ್ಲಿ ಅವರ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ನೀಡಲು ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲೂಕು ಮಟ್ಟದಲ್ಲಿ ವಿಶೇಷ ಸಹಾಯವಾಣಿ ತೆರೆಯಲಾಗುವುದು. ಒಟ್ಟಾರೆಯಾಗಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಜಿಲ್ಲಾಡಳಿತ ಕ್ರಿಯಾಶೀಲವಾಗಿ ಸಾರ್ವಜನಿಕರ ತೊಂದರೆಗೆ ಸ್ಪಂದಿಸಿ ಪರಿಹಾರ ಒದಗಿಸಲಿದೆ ಎಂದು ಸಚಿವ ಎಚ್.ಕೆ.ಪಾಟೀಲ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಹಾಜರಿದ್ದರು.

# ರಸ್ತೆ ಅಭಿವೃದ್ಧಿ ಕಾಮಗಾರಿ ವಿಶೇಷ ಆಸಕ್ತಿ ವಹಿಸಿ ಪೂರ್ಣಗೊಳಿಸಿ

▶▶ ಮೊದಲನೇ ಪುಟದಿಂದ

ಹಾಸ್ಪಿಟಲ್‌ವರೆಗಿನ ರಸ್ತೆ ಕಾಮಗಾರಿ ಪೂರ್ಣಗೊಳ್ಳಬೇಕು ಎಂದು ಸಚಿವರು ತಿಳಿಸಿದಾಗ ಅಲ್ಲಿನ ನೀರು ಸರಬರಾಜು ಪೈಪ್‌ಲೈನ್ ಕಾಮಗಾರಿ ಪ್ರಾರಂಭವಾಗಿರುವುದರಿಂದ ರಸ್ತೆ ದುರಸ್ತಿ ಕಾಮಗಾರಿಗೆ ಸ್ವಲ್ಪ ವಿಳಂಬವಾಗಿದೆ. ಆದಷ್ಟು ಶೀಘ್ರವೇ ಕಾಮಗಾರಿಯನ್ನು ಪೂರ್ಣ ಗೊಳಿಸಲಾಗುವುದು ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು.

ಗದಗ ನಗರದ ಧೋಬಿ ಘಾಟ್‌ನಿಂದ ರಾಧಾಕೃಷ್ಣನಗರ –ಜಿಮ್ಸ್ ಮೆಡಿಕಲ್ ಕಾಲೇಜು ಬ್ರಿಡ್ಜ್ ಪೂರ್ಣಗೊಳಿಸಲು ಕ್ರಮ ವಹಿಸಬೇಕು. ಬೆಳಧಡಿ ಕ್ರಾಸ್ –ಯಲಿಶಿರೂರ ಕ್ರಾಸ್ ರಸ್ತೆ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಕೇಶಿಪ್ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ಪಿ.ಆರ್.ಇ.ಡಿ. ವಿಭಾಗದ ಕಾರ್ಯಪಾಲಕ ಅಭಿಯಂತರ ಎಸ್.ಆರ್.ಗೌಡರ, ನಗರಸಭೆ ಪೌರಾಯುಕ್ತ ಗಂಗಪ್ಪ ಎಂ, ಕೇಶಿಪ್ ಸಹಾಯಕ ಕಾರ್ಯಪಾಲಕ ಅಭಿಯಂತರ ಶ್ರೀಶೈಲ ಹೊನಕೇರಿ, ಕೆಆರ್‌ಡಿಸಿಎಲ್ ಕಾರ್ಯಪಾಲಕ ಅಭಿಯಂತರ ಮುರಳೀಧರ ಸೇರಿದಂತೆ ವಿವಿಧ ಅನುಷ್ಠಾನ ಇಲಾಖೆ ಹಾಗೂ ಏಜೆನ್ಸಿಗಳ ಮುಖ್ಯಸ್ಥರು ಹಾಜರಿದ್ದರು.

# ಶಾಂತಿ ಕದಡುವವರಿಗೆ ಕಠಿಣ ಕ್ರಮ ನಿಶ್ಚಿತ: ಡಿವೈಎಸ್‌ಪಿ ಎಂ.ಬಿ ಸಂಕದ

▶▶ ಮೊದಲನೇ ಪುಟದಿಂದ

ದೂದನಾನಾ ದರ್ಗಾ, ಹಾವಳಿ ಹನುಮಂತ ದೇವಸ್ಥಾನ ಸೇರಿ ಸೂಕ್ಷ್ಮ, ಅತಿ ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರು ಸುತ್ತು ಹಾಕಿದರು. ನಂತರ ಶಿಗ್ಲಿ ನಾಕಾ ಮಾರ್ಗವಾಗಿ ಪೊಲೀಸ್ ಠಾಣೆಗೆ ತೆರಳಿ ಮುಕ್ತಾಯಗೊಳಿಸಿದರು.

ನಂತರ ಮಾತನಾಡಿದ ಡಿವೈಎಸ್‌ಪಿ ಎಂ.ಬಿ ಸಂಕದ, ಗಣೇಶನ ಹಬ್ಬ ಮತ್ತು ಈದ್–ಮಿಲಾದ್ ಹಬ್ಬ ಶಾಂತಿಯುತವಾಗಿ ನಡೆಯಬೇಕೆನ್ನುವ ಉದ್ದೇಶದಿಂದ ಇಲಾಖೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಂಡಿದೆ. ಪೊಲೀಸ್ ಹಿರಿಯ ಅಧಿಕಾರಿಗಳು ಸೇರಿ ಕೆಎಸ್‌ಆರ್‌ಪಿ, ಡಿಎಆರ್, ಹೋಮಗಾರ್ಡ್ ಸಿಬ್ಬಂದಿಗಳನ್ನು ನೇಮಿಸಲಾಗಿದೆ. ಸಾರ್ವಜನಿಕ ಶಾಂತಿಸಭೆ ಮಾಡಿದ್ದೇವೆ. ಹಬ್ಬದ ನಿಮಿತ್ತ ಪಟ್ಟಣದಲ್ಲಿ ಸಾಕಷ್ಟು ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಡ್ರೋನ್ ಕ್ಯಾಮರಾಗಳನ್ನು ಸಹ ಬಳಸಲಾಗುತ್ತಿದ್ದು, ಶಾಂತಿ ಕದಡುವವರಿಗೆ ಕಠಿಣ ಕ್ರಮ ನಿಶ್ಚಿತ. ಈ ಬಾರಿ ಹಿಂದೂ–ಮುಸ್ಲಿಂ ಹಬ್ಬ ಶಾಂತಿಯುತವಾಗಿ ನಡೆಯುವ ಸಂಪೂರ್ಣ ವಿಶ್ವಾಸವನ್ನು ಇಲಾಖೆ ಹೊಂದಿದೆ ಎಂದು ಹೇಳಿದರು.

ಈ ವೇಳೆ ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಯೂಸೆಫ್ ಜಮೂಲಾ ಸೇರಿದಂತೆ ಅನೇಕರು ಹಾಜರಿದ್ದರು.



ಮುಳಗುಂದ ಪಟ್ಟಣದಲ್ಲಿ ಗಣೇಶ ಚತುರ್ಥಿ ನಿಮಿತ್ತ ಸಂಭ್ರಮದಿಂದ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಲಾಯಿತು. ಪಟ್ಟಣ ಸೇರಿದಂತೆ ಸುತ್ತ ಮುತ್ತಲಿನ ಗ್ರಾಮಗಳಲ್ಲಿ ಬರದ ಛಾಯೆಯ ನಡುವೆಯೂ ಗಣೇಶ ಹಬ್ಬಕ್ಕೆ ಯಾವುದೇ ಜಾತಿ–ಮತಗಳ ಬೇಧವಿಲ್ಲದೆ ಗಣೇಶ ವಿಗ್ರಹವನ್ನು ಪ್ರತಿಷ್ಠಾಪಿಸಿ ಪೂಜೆ ನೆರವೇರಿಸಿದರು.

### ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರಕ್ಕೆ ಚಾಲನೆ ನೀಡಿದ ಶಾಸಕ ಡಾ. ಚಂದ್ರು ಲಮಾಣಿ

# ಮಹತ್ವದ ಯೋಜನೆಯ ಲಾಭ ಪಡೆದುಕೊಳ್ಳಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇಶದ ಕಟ್ಟಕಡೆಯ ವ್ಯಕ್ತಿಯೂ ಆರೋಗ್ಯವಂತನಾಗಿರಬೇಕು, ಎಲ್ಲರಿಗೂ ಉಚಿತ ಆರೋಗ್ಯ ಸೇವೆ ಲಭ್ಯವಾಗಬೇಕು ಎಂಬುದು 'ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ' ಯೋಜನೆಯ ಉದ್ದೇಶವಾಗಿದೆ. ತಜ್ಞ ವೈದ್ಯರಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಸುವ ಉಚಿತ ಆರೋಗ್ಯ ತಪಾಸಣೆಯ ಪ್ರಯೋಜನವನ್ನು ನಾಗರಿಕರು ಪಡೆದುಕೊಳ್ಳಬೇಕು ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.



ಅವರು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಆಯುಷ್ಮಾನ್ ಭವ ಅಭಿಯಾನದಡಿಯಲ್ಲಿ ತಜ್ಞ ವೈದ್ಯರುಗಳಿಂದ ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾಮೀಣ ಪ್ರದೇಶದ ಬಡ ಜನರಿಗೆ ಉತ್ತಮ ವೈದ್ಯಕೀಯ ಸೇವೆ ಕಲ್ಪಿಸಲು ಈ ಯೋಜನೆ ಅನುಕೂಲಕರವಾಗಿದೆ. ಬಿಪಿಎಲ್ ಪಡಿತರ ಕಾರ್ಡ್ ಮತ್ತು ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯಲ್ಲಿ ನೋಂದಾಯಿಸಿಕೊಂಡಿರುವ ಎಲ್ಲರಿಗೂ ವರ್ಷಕ್ಕೆ 5 ಲಕ್ಷ ರೂ.ವರೆಗಿನ ಆರೋಗ್ಯ ಸೇವೆ ಈ ಯೋಜನೆಯಲ್ಲಿ ಲಭ್ಯವಿದೆ. ಭಾರತದ ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರು ಸೆಪ್ಟೆಂಬರ್ 13ರಂದು ಆಯುಷ್ಮಾನ್ ಭವ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ಇದರಡಿ ಪಿಎಂಜೆಎವೈ ಬಗ್ಗೆ ಗರಿಷ್ಠ ಪ್ರಮಾಣದ ಜಾಗೃತಿ ಮೂಡಿಸುವುದು, ಆಯುಷ್ಮಾನ್ ಭವ ಭಾರತ್ ಆರೋಗ್ಯ ಖಾತೆ ಐಡಿಗಳನ್ನು ಸೃಷ್ಟಿಸುವುದು ಮತ್ತು ನಮ್ಮ ಹಳ್ಳಿಗಳಲ್ಲಿ ಮತ್ತು ನಗರದ ವಾರ್ಡ್ ಪ್ರದೇಶಗಳಲ್ಲಿ ರೋಗಗಳ ತಪಾಸಣೆ ಮಾಡುವದು ಇದರ ಉದ್ದೇಶವಾಗಿದೆ. ಎಲ್ಲರೂ ಇಂತಹ ಮಹತ್ವದ ಯೋಜನೆಯ ಲಾಭ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಶಿಬಿರದಲ್ಲಿ ನೂರಾರು ಜನರು ಹೃದಯ, ಮಧುಮೇಹ, ಎಲುಬು, ಕೀಲು, ಕಣ್ಣು, ಸ್ತ್ರೀ ರೋಗ ಸೇರಿದಂತೆ ವಿವಿಧ ಬಗೆಯ ಕಾಯಿಲೆಗಳಿಗೆ ನುರಿತ ತಜ್ಞರಿಂದ ತಪಾಸಣೆಗೊಂಡರು. ತಾಲೂಕಾ ಆರೋಗ್ಯ ವೈದ್ಯಾಧಿಕಾರಿ ಡಾ.ಸುಭಾಸ ದಾಯಗೊಂಡ, ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾದಿಕಾರಿ ಡಾ. ಶ್ರೀಕಾಂತ ಕಾಟೆವಾಲೆ, ಜಿಲ್ಲಾ ಸಮೀಕ್ಷಣ ಅಧಿಕಾರಿ ಡಾ. ವೆಂಕಟೇಶ ರಾಠೋಡ, ಡಾ. ಪ್ರವೀಣ ಸಜ್ಜನ್, ಬಿ.ಎಸ್ ಹಿರೇಮಠ, ನವೀನ ಬೆಳ್ಳಟ್ಟಿ, ಗಂಗಾಧರ ಮೆಣಸಿನಕಾಯಿ ,ದುಂಡೇಶ ಕೊಟಗಿ, ವಾಸು ಪಾಟೀಲ ಸೇರಿದಂತೆ ಸಮುದಾಯ ಆರೋಗ್ಯ ಕೇಂದ್ರದ ವೈದ್ಯರು, ಸಿಬ್ಬಂದಿಗಳು ಇದ್ದರು. ಕೃಷ್ಣಕುಮಾರ ಕುಲಕರ್ಣಿ ನಿರ್ವಹಿಸಿದರು.

ಈ ವೇಳೆ ಶಾಸಕ ಡಾ.ಚಂದ್ರು ಲಮಾಣಿ ಸಮುದಾಯ ಆರೋಗ್ಯ ಕೇಂದ್ರದ ಮೊದಲನೇ ಮಹಡಿಯಲ್ಲಿ ನಿರ್ಮಿಸಲಾದ ನೂತನ ಸಭಾಭವನವನ್ನು ಉದ್ಘಾಟಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಡಾ. ಎಸ್.ಎಸ್ ನೀಲಗುಂದ ಆಯುಷ್ಮಾನ್ ಭವ ಅಭಿಯಾನದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿ, ಈ ಯೋಜನೆಯ ಬಗ್ಗೆ ನಗರ, ಪಟ್ಟಣ, ಗ್ರಾಮೀಣ ಪ್ರದೇಶಗಳಲ್ಲಿನ ಜನರಿಗೆ ತಿಳಿಸುವ ನಿಟ್ಟಿನಲ್ಲಿ ಆಶಾ–ಅಂಗನವಾಡಿ ಕಾರ್ಯಕರ್ತೆಯರಿಂದ ಪ್ರತೀ ಮನೆಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಕಾರ್ಯವನ್ನು ಮಾಡಲಾಗುತ್ತದೆ. ಅನೇಕ ಬಡ ರೋಗಗಳಿಗೂ ಈ ಯೋಜನೆಯಿಂದ ಚಿಕಿತ್ಸೆ ದೊರೆಯುತ್ತದೆ. ಬಿಪಿಎಲ್, ಎಪಿಎಲ್ ಕಾರ್ಡದಾರರು ಸಹ ಈ ಯೋಜನೆಯ ಪ್ರಯೋಜನ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

# ಇಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳ ಉದ್ಘಾಟನೆ

▶▶ ಮೊದಲನೇ ಪುಟದಿಂದ

ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕರಾದ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ, ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ ಅವರು ಆಗಮಿಸುವರು. ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಅವರು ಸರ್ವರಿಗೂ ಸ್ವಾಗತ ಕೋರಿದ್ದಾರೆ.



ಗದಗ ನಗರದ ಶ್ರೀ ಗಾನಯೋಗಿ ಪಂಚಾಕ್ಷರಿ ಗವಾಯಿಗಳವರ ಮಾರುಕಟ್ಟೆ ಪ್ರಾಂಗಣ, ಎ.ಪಿ.ಎಂ.ಸಿ.ಯಾರ್ಡ್‌ನಲ್ಲಿ ಶ್ರೀ ಗಜಾನನ ಉತ್ಸವ ಸಮಿತಿ, ಗದಗ ದಲಾಲರು, ಖರೀದಿದಾರರ ವತಿಯಿಂದ ಇಂದು ಗಣೇಶನ ಪ್ರತಿಷ್ಠಾಪನೆ ಮಾಡಲಾಯಿತು. ಈ ನೂತನ ಗಣೇಶ ಮಂಟಪವನ್ನು ಶಾಸಕರ ಅನುದಾನದಲ್ಲಿ ನಿರ್ಮಿಸಲಾಗಿದ್ದು, ಮಂಗಳವಾರ ಸಂಜೆ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ನೂತನ ಗಣಪತಿ ಮಂಟಪ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಗಣೇಶನಿಗೆ ವಿಶೇಷ ಪೂಜೆ ನೆರವೇರಿಸಿದ ಸಚಿವರು, ವಿಘ್ನೇಶ್ವರ ನಮ್ಮೆಲ್ಲರ ವಿಘ್ನಗಳನ್ನು ದೂರಮಾಡಲಿ. ವಿನಾಯಕನು ರೈತರ ಕಷ್ಟಗಳನ್ನು ಪರಿಹರಿಸಿ ಮಳೆ, ಬೆಳೆ ಚೆನ್ನಾಗಿ ಆಗುವ ಮೂಲಕ ರೈತರ ಸಮಸ್ಯೆಗಳು ದೂರಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಶ್ರೀ ಗಜಾನನ ಉತ್ಸವ ಸಮಿತಿ ಅಧ್ಯಕ್ಷ ತಿಮ್ಮಣ್ಣ ಕೋನರಡ್ಡಿ, ಕಾರ್ಯದರ್ಶಿ ಚಂದ್ರಣ್ಣ ಸವದತ್ತಿ, ರಾಜು ಮುದೋಳ, ರಾಜು ಮೂಲಿಮನಿ, ಪ್ರಮೋದ್ ವಾರಕರ್, ಬಸವರಾಜ ಬಾಳಿಕಾಯಿ, ಅಜಿತ್ ಪುಣೇಕರ್, ದಯಾನಂದ ದುಂಡಪ್ಪನವರ, ಈರಣ್ಣ ಕಾಡಪ್ಪನವರ, ನಿತೀಶ್ ವಾಲಿ, ಪುನೀತ್ ಬಾಂಡಗೆ, ಮಂಜಣ್ಣ ಬೇಲೇರಿ, ಸತೀಶ್ ಕುಂದಗೋಳ, ಶರತ್ ಅಗಡಿ, ಶೇಖಣ್ಣ ಗದ್ದಿಕೇರಿ, ರಾಜು ಗುಡಿಮನಿ, ಮಧುಸೂದನ್ ಪುಣೇಕರ್, ವಿನಾಯಕ ವಜ್ರಶ್ವರಿ, ರಮೇಶ್ ಶೆಟ್ಟೆಮ್ಮನವರ ಮುಂತಾದವರು ಉಪಸ್ಥಿತರಿದ್ದರು.

# ಕ.ರಾ.ಸ ನೌಕರರ ಸಂಘದ ಸರ್ವ ಸದಸ್ಯರ ವಿಶೇಷ ಮಹಾಸಭೆ

■ **ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಬೈಲಾ ಉಪವಿಧಿಗಳು–2022ರ ಕೆಲವು ಉಪವಿಧಿಗಳಿಗೆ ತಿದ್ದುಪಡಿ ತರಲು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸರ್ವ ಸದಸ್ಯರ ವಿಶೇಷ ಮಹಾ ಸಭೆಯನ್ನು ವಾಸ್ತವ ಮತ್ತು ವರ್ಚುವಲ್ ವಿಧಾನದ ಮೂಲಕ ರಾಜ್ಯಾಧ್ಯಕ್ಷ ಸಿ.ಎಸ್ ಷಡಕ್ಷರಿಯವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 1ರಂದು ಏರ್ಪಡಿಸಲಾಗಿದೆ.



ಅಂದು ಮುಂಜಾನೆ 11 ಗಂಟೆಗೆ ಕೊಪ್ಪಳದ ಹಿರೇಸಿಂದೋಗಿ ರಸ್ತೆಯಲ್ಲಿರುವ ಮಹಾವೀರ ಕಲ್ಯಾಣ ಮಂಟಪದಲ್ಲಿ ಸಭೆ ನಡೆಯಲಿದ್ದು, ಮುಂಡರಗಿ ತಾಲೂಕಿನ ಸರ್ವ ಸದಸ್ಯರು ಸದರಿ ಸಭೆಯಲ್ಲಿ ಭಾಗವಹಿಸುವಂತೆ ತಾಲೂಕಾಧ್ಯಕ್ಷ ನಾಗರಾಜ ಬ.ಹಳ್ಳಿಕೇರಿ ಕೋರಿದ್ದಾರೆ.

ವರ್ಚುವಲ್ ವೇದಿಕೆ ಮೂಲಕ ಭಾಗವಹಿಸಲು ಸದಸ್ಯರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದ್ದು, http://bit.ly/ksgeasplgಘಟ ಲಿಂಕ್ ಬಳಸಿ ಸಭೆಯಲ್ಲಿ ಭಾಗವಹಿಸಬಹುದು. ಉದ್ದೇಶಿತ ತಿದ್ದುಪಡಿ ಉಪವಿಧಿಗಳ ಸಂಪೂರ್ಣ ವಿವಿರಗಳನ್ನು ನೋಟೀಸ್‌ನೊಂದಿಗೆ ಸದಸ್ಯರ ಮೊಬೈಲ್ ಸಂಖ್ಯೆಗೆ ಹಾಗೂ ನೌಕರರ ವಾಟ್ಸಾಪ್ ಗುಂಪುಗಳ ಮೂಲಕ ಸಾಫ್ಟ್ ಪ್ರತಿಯನ್ನು ಕಳುಹಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಘದ ಕಾರ್ಯದರ್ಶಿ ಶಂಕರ ಸರ್ವದೆ(ಮೊಬೈಲ್: 8123803391) ಯವರನ್ನು ಸಂಪರ್ಕಿಸುವಂತೆ ಕೋರಿದೆ.

# ಸಂಭ್ರಮದ ರಥೋತ್ಸವ

■ **ವಿಜಯಸಾಕ್ಷಿ ಸುದ್ದಿ, ರೋಣ**

ಇಲ್ಲಿನ ಮಾರನಬಸರಿ ಗ್ರಾಮದ ಶರಣಬಸವೇಶ್ವರರ ಮಹಾರಥೋತ್ಸವವು ಸಾವಿರಾರು ಭಕ್ತರ ಸಂಗಮದಲ್ಲಿ ಅತ್ಯಂತ ಸಂಭ್ರಮದಿಂದ ಜರುಗಿತು. ರಥೋತ್ಸವದ ನಿಮಿತ್ತ ಗ್ರಾಮದ ಪ್ರಮುಖ ಬಿದಿಗಳನ್ನು ತಳಿರು–ತೋರಣಗಳಿಂದ ಸಿಂಗರಿಸಲಾಗಿತ್ತು.

ಶರಣಬಸವೇಶ್ವರ ರಥೋತ್ಸವದಲ್ಲಿ ಪಾಲ್ಗೊಂಡಿದ್ದ ಭಕ್ತ ಸಮುದಾಯ ತೇರಿಗೆ ಹೂವು, ಉತ್ತತ್ತಿ ಹಣ್ಣುಗಳನ್ನು ಎಸೆಯುವ ಮೂಲಕ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು.



# ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಸಾಧನೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಪದವಿಪೂರ್ವ ಶಿಕ್ಷಣ ಇಲಾಖೆ ಗದಗ ಹಾಗೂ ಭಾರತೀಯ ಶಿಕ್ಷಣ ಸಂಸ್ಥೆಯ ಬಿಪಿನ್ ಚಿಕ್ಕಟ್ಟಿ ಪದವಿಪೂರ್ವ ಮಹಾವಿದ್ಯಾಲಯ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲಾ ಮಟ್ಟದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟ 2023–24 ಗದಗ ನಗರದ ಕೆ.ಹೆಚ್ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿತು.



ಈ ಕ್ರೀಡಾಕೂಟದಲ್ಲಿ ವೈಯಕ್ತಿಕ ಆಟದ ವಿಭಾಗದಲ್ಲಿ ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದ ದ್ವಿತೀಯ ವಾಣಿಜ್ಯ ವಿಭಾಗದ ವಿದ್ಯಾರ್ಥಿ ಚೆನ್ನಬಸವ ರಾಮನಕೊಪ್ಪ ವೈಯಕ್ತಿಕ ಕ್ರೀಡೆಯಾದ ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದು, ದ್ವಿತೀಯ ವರ್ಷದ ವಿಜ್ಞಾನ ವಿಭಾಗದ ವಿದ್ಯಾರ್ಥಿ ಶಾನ್ವಾಜ ಅನ್ಸಾರಿ ಗುಂಡು ಎಸೆತದಲ್ಲಿ ತೃತೀಯ ಸ್ಥಾನ ಪಡೆದುಕೊಂಡಿದ್ದಾನೆ.

ಸಾಧಕ ಕ್ರೀಡಾಪಟುಗಳನ್ನು ಸಂಸ್ಥೆಯ ಚೇರ್‌ಮನ್ ಪ್ರೊ. ರಾಜೇಶ್ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಹಾಗೂ ಆಡಳಿತ ಮಂಡಳಿಯ ಪದಾಧಿಕಾರಿಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರೋಹಿತ್ ಒಡೆಯರ್, ಆಡಳಿತಾಧಿಕಾರಿ ಎಮ್.ಸಿ ಹಿರೇಮಠ, ಉಪನ್ಯಾಸಕರು, ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

### ಶ್ರೀಕೃಷ್ಣ ಮಂದಿರದ ಕಳಸಾರೋಹಣ ಸಮಾರಂಭದಲ್ಲಿ ಬೂದೀಶ್ವರ ಸ್ವಾಮೀಜಿ ಅಭಿಮತ

# ಮನದ ಮೈಲಿಗೆಯ ಶುದ್ಧಿಗೆ ದೇವಸ್ಥಾನಗಳು ಬೇಕು

■ **ವಿಜಯಸಾಕ್ಷಿ ಸುದ್ದಿ, ಗದಗ**

ಮಾನವ ಜನ್ಮ ದೊಡ್ಡದು, ಮನದ ಕೊಳಕನ್ನು ಶುದ್ಧೀಕರಿಸಲು ದೇವಸ್ಥಾನಗಳಿಗೆ ಹೋಗಿ ಮಹಾತ್ಮರ ನುಡಿ ಆಲಿಸಿ, ಸಹನೆ–ಶಾಂತಿ, ದಾನ ನೀಡುವ ಗುಣಗಳನ್ನು ಅಳವಡಿಸಿಕೊಂಡರೆ ಮನುಕುಲ ಗುಣಾತ್ಮಕವಾಗುತ್ತದೆ ಎಂದು ಹೊಸಹಳ್ಳಿಯ ಬೂದೀಶ್ವರ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.



ಇಲ್ಲಿನ ಹುಲಕೋಟಿ ಕೃಷ್ಣಾ ಕಾಲೋನಿಯ ಶ್ರೀಕೃಷ್ಣ ಮಂದಿರ ಮತ್ತು ಸಮುದಾಯ ಭವನದ ಟ್ರಸ್ಟ್ ಅಡಿಯಲ್ಲಿ ನಡೆದ ಶ್ರೀಕೃಷ್ಣ ಮಂದಿರದ ಕಳಸಾರೋಹಣ ಸಮಾರಂಭದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕಾನೂನು, ಪ್ರವಾಸೋದ್ಯಮ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ ಮಾತನಾಡಿ, ಸಜ್ಜನರ ಸಂಗದಿಂದ ಅಜ್ಞಾನ ಅಡಗುತ್ತದೆ ಮತ್ತು ಸಮಾಜವೂ ಸುದಾರಿಸುತ್ತದೆ. ದೇವಸ್ಥಾನಗಳು ಜನರನ್ನು ಕೆಟ್ಟ ಮಾರ್ಗಕ್ಕೆ ಕರೆದುಕೊಂಡು ಹೋಗುವದಿಲ್ಲ. ಎಲ್ಲರೂ ನನ್ನವರೇ ಎಂಬ ಭಾವನೆಗೆ ಕೇಂದ್ರಬಿಂದುಗಳಾಗಬೇಕು ಎಂದರು.

ವೇದಿಕೆಯಲ್ಲಿ ಪೂಜ್ಯ ಲಡ್ಡು ಮುತ್ಯಾ ಶ್ರೀಗಳು, ಗ್ರಾಮಾಭಿವೃದ್ಧಿ ಸಂಘದ ಅಧ್ಯಕ್ಷ ಪಿ.ಕೆ ಪಾಟೀಲ, ಟ್ರಸ್ಟ್‌ನ ಅಧ್ಯಕ್ಷ ವಾಯ್.ಬಿ ಕರಿಕಟ್ಟಿ, ಕಾರ್ಯದರ್ಶಿ ಬಸನಗೌಡ ಮುಳ್ಳೂರ, ಗ್ರಾ.ಪಂ ಅಧ್ಯಕ್ಷರಾದ ನಾಗರತ್ನ ಬಾಳಿಹಳ್ಳಿಮಠ, ಉಮಾ ಹಾದಿಮನಿ, ಅಭಿಯಂತರರಾದ ಬ್ಯಾಳಿ, ಡಾ. ಅರ್ಜುನ ಗೋಳಸಂಗಿ, ಎಂ.ಆರ್ ಪಾಟೀಲ, ಡಾ. ನಾಗನೂರ ಮುಂತಾದವರು ಹಾಜರಿದ್ದರು.

ನಾರಾಯಣ ಕುರ್ತಕೋಟಿ, ಭರಮಪ್ಪ ಅಮಾಗಿ, ಅಪ್ಪಣ್ಣ ಜಿನಗಿ, ಡಿ.ಆರ್ ಕರಿರಾಯನಗೌಡ, ಏಕನಾಥ ಕರಿರಾಯನಗೌಡ, ಬಸಯ್ಯ ಕಂದಕೂರ, ಎಚ್.ಡಿ ಪಾಟೀಲ, ಮಂಜುಕಿರಣ ಪಾಟೀಲ, ಶಿವರಾಜ ಕುಲಕರ್ಣಿ, ಆರ್.ಎಂ ಓದುಗೌಡರ, ಎಸ್.ಜಿ ಪಾಟೀಲ, ಸುರೇಶ ಜಲರಡ್ಡಿ, ಲಿಂಗನಗೌಡ, ವಿಜಯಲಕ್ಷ್ಮೀ ಕರಿಕಟ್ಟಿ, ಸುನೀಲ್ ತಿರ್ಲಾಪೂರ, ಈರಯ್ಯ ಹಿರೇಮಠ, ಅಶೋಕ ವಿ.ಪ್ರಭು ಇವರನ್ನು ಸನ್ಮಾನಿಸಲಾಯಿತು. ಡಾ. ಅರ್ಜುನ ಗೋಳಸಂಗಿ ಸ್ವಾಗತಿಸಿದರು. ಆಯ್.ಎಸ್ ಹಿರೇಮಠ ನಿರೂಪಿಸಿದರು. ಎ.ವಿ ಪ್ರಭು ವಂದಿಸಿದರು.

# ಶ್ರೀ ಮಹಾತಪಸ್ವಿ ಸೇವಾ ಪ್ರತಿಷ್ಠಾನದಿಂದ ಪ್ರತಿಭಾ ಪುರಸ್ಕಾರ ಇಂದು

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹರಿಹರದ ಶ್ರೀ ಮಹಾ ತಪಸ್ವಿ ಸೇವಾ ಪ್ರತಿಷ್ಠಾನ ಉಪಶಾಖೆ ಲಕ್ಷ್ಮೇಶ್ವರ ಹಾಗೂ ಶ್ರೀ ಜಿ.ಎಫ್ ಉಪನಾಳ ಟ್ರಸ್ಟ್‌ನ ಆಶ್ರಯದಲ್ಲಿ ಗೌರಿ ಗಣೇಶ ಹಬ್ಬದ ಪ್ರಯುಕ್ತ 'ಗುಡಿ ಕಾಯುವ ಗರ್ಭಗುಡಿಗೆ ನಮನ' ಅಭಿಯಾನ ಹಾಗೂ ವಿದ್ಯಾರ್ಥಿಗಳಿಗೆ ಉಚಿತ ಕಲಿಕಾ ಸಾಮಗ್ರಿ ವಿತರಣಾ ಕಾರ್ಯಕ್ರಮವನ್ನು ಬುಧವಾರ ಬೆಳಿಗ್ಗೆ 10ಕ್ಕೆ ಪಟ್ಟಣದ ಸೋಮೇಶ್ವರ ಜಿ.ಎಫ್ ಉಪನಾಳ ಟ್ರಸ್ಟ್ ಶಾಂತಿಧಾಮ ವೃದ್ಧಾಶ್ರಮದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಾನ್ನಿಧ್ಯವನ್ನು ಶ್ರೀ ಮಹಾತಪಸ್ವಿ ಸೇವಾ ಪ್ರತಿಷ್ಠಾನದ ಸಂಸ್ಥಾಪಕರಾದ ಶ್ರೀ ಗುರುರಾಜ ಗುರೂಜಿ ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಜಿ.ಎಫ್ ಉಪನಾಳ ಟ್ರಸ್ಟ್‌ನ ಅಧ್ಯಕ್ಷ ಪ್ರಕಾಶ ಉಪನಾಳ ವಹಿಸುವರು. ಶಾಸಕ ಡಾ.ಚಂದ್ರು ಲಮಾಣಿ ಕಾರ್ಯಕ್ರಮ ಉದ್ಘಾಟಿಸುವರು. ಅತಿಥಿಗಳಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯ ಅಂಗವಿಕಲರ ಕಲ್ಯಾಣಾಧಿಕಾರಿ ಮಹಾಂತೇಶ ಕುರಿ, ಪ್ರತಿಷ್ಠಾನ ರಾಜ್ಯಾಧ್ಯಕ್ಷೆ ಕೆ.ಸಿ ಶಾಂತಕುಮಾರಿ, ತಹಸೀಲ್ದಾರ ಕೆ.ಆನಂದ ಶೀಲ, ಅರಳು ವಿಶೇಷ ಅಗತ್ಯವುಳ್ಳ ಬುದ್ಧಿಮಾಂದ್ಯ ಮಕ್ಕಳ ಶಾಲೆಯ ಸಂಸ್ಥಾಪಕಿ ನೀಲಮ್ಮ ದಾಸಪ್ಪನವರ, ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ, ಎಸ್.ಕೆ ಹವಾಲ್ದಾರ ಹಲವರು ಆಗಮಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಇಸ್ರೋದ ರಾಕೆಟ್ ಅಲಂಕಾರದಲ್ಲಿ ಚಂದ್ರ ಗಣಪತಿ ಪ್ರತಿಷ್ಠಾಪನೆ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಂಭಾಪೂರ ರಸ್ತೆಯಲ್ಲಿರುವ ಬಾಲವಿನಾಯಕ ವಿದ್ಯಾನಿಕೇತನ ಶಿಕ್ಷಣ ಸಂಸ್ಥೆಯಲ್ಲಿ ಚಂದ್ರಯಾನ-3 ಯಶಸ್ಸಿನ ಸಂಭ್ರಮಾಚರಣೆಯ ಸವಿ ನೆನಪಿನೊಂದಿಗೆ ರಾಕೆಟ್‌ನಲ್ಲಿ ಚಂದ್ರ ಗಣಪತಿ ನಿರ್ಮಿಸಿರುವುದು ಸಾರ್ವಜನಿಕರ ಗಮನ ಸೆಳೆಯುತ್ತಿದೆ.

ಕಲಾ ಶಿಕ್ಷಕರಾದ ಸಂತೋಷ ಜೋಗಿ, ಗಣೇಶ ಚವಡಿಯವರು ಈ ಗಣಪತಿಯನ್ನು ನಿರ್ಮಿಸಿದ್ದು, ಪ್ರೋತ್ಸಾಹ, ಸಹಕಾರ ನೀಡಿದ ಹಿರಿಯ ಶಿಕ್ಷಕರಾದ ಪ್ರಮೋದಸಿಂಗ್ ಬ್ಯಾಳಿ, ಮುಖ್ಯೋಪಾಧ್ಯಾಯರಾದ ವಿ.ಎಂ ಅಡ್ನೂರಯವರಿಗೆ ಸಂಸ್ಥೆಯ ಅಧ್ಯಕ್ಷರಾದ ಎಸ್.ರವಿ, ಆಡಳಿತ ಅಧಿಕಾರಿಗಳಾದ ಗಂಗಾ, ವಿನಾಯಕ ಆರ್, ಇಎಲ್‌ಸಿಯ ಮುಖ್ಯಸ್ಥರಾದ ಶ್ರೀಮತಿ ಮಲ್ಲಿಕಾ ಆರ್., ಸಂಸ್ಥೆಯ ಶಿಕ್ಷಕ, ಶಿಕ್ಷೇತರ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಸಾಲದ ಬಾಧೆ ತಾಳಲಾರದೆ ರೈತ ಆತ್ಮಹತ್ಯೆಗೆ ಶರಣು



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಛಬ್ಬಿ ಗ್ರಾಮದ ರೈತ ನೀಲಪ್ಪ ಶಿದ್ಲಿಂಗಪ್ಪ ಗೊರವರ(38) ಎಂಬಾತ ಮಂಗಳವಾರ ಬೆಳಗಿನ ಜಾವ ಸಾಲದ ಬಾಧೆ ತಾಳಲಾರದೇ ತನ್ನ ಸ್ವಂತ ಜಮೀನಿನಲ್ಲಿ ಗಿಡವೊಂದಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಮೃತ ರೈತ ಶಿರಹಟ್ಟಿಯ ಕೆವಿಜಿ ಬ್ಯಾಂಕ್‌ನಲ್ಲಿ 2.50 ಲಕ್ಷ ರೂ ಬೆಳೆಸಾಲ ತೆಗೆದುಕೊಂಡಿದ್ದು, ಜಮೀನಿನಲ್ಲಿ ಬೆಳೆ ಸರಿಯಾಗಿ ಬಾರದೇ ಇದ್ದುದರಿಂದ ಬೆಳೆಸಾಲ ತೀರಿಸುವುದು ಕಷ್ಟಸಾಧ್ಯ ಎಂದು ಮನನೊಂದು ಬೆಳಗಿನ 'ಜಾವ ತನ್ನ ಜಮೀನಲ್ಲಿ ನೇಣಿಗೆ ಶರಣಾಗಿದ್ದಾನೆಂದು ಮೃತನ ಪತ್ನಿ ಎಫ್‌ಐಆರ್‌ನಲ್ಲಿ ಉಲ್ಲೇಖಿಸಿದ್ದು, ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಸಂಕಷ್ಟಗಳ ಸರಮಾಲೆಯ ನಡುವೆಯೂ ಅದ್ದೂರಿಯಾಗಿ ಮಂಗಳಮೂರ್ತಿ ಪ್ರತಿಷ್ಠಾಪನೆ

# ವಿಘ್ನಗಳ ಕಳೆಯೋ ವಿನಾಯಕ





ನೀರಿನ ಅಭಾವದ ಹಿನ್ನೆಲೆಯಲ್ಲಿ ಈ ವರ್ಷವೂ ಪಟ್ಟಣದ ಶಿಗ್ಲಿ ನಾಕಾದ ಪುರಸಭೆ ಆಸ್ತಿಯ ಸರ್ವೆ ನಂ.1ರ ಖಾಲಿ ನಿವೇಶನ ಮತ್ತು ಪಂಪವೃತ್ತದ ಹತ್ತಿರ ಕೃತಕ ಹೊಂಡ ನಿರ್ಮಿಸಲಾಗುವುದು ಎಂದು ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ ತಿಳಿಸಿದ್ದಾರೆ.





■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬರಗಾಲ ಮತ್ತು ಗಣೇಶ ಪ್ರತಿಷ್ಠಾಪನೆಗೆ ಯಾವ ದಿನ ಸೂಕ್ತ ಎಂಬ ದ್ವಂದ್ವದ ನಡುವೆಯೂ ಕಳೆದ ಮೂರ್ನಾಲ್ಕು ದಿನಗಳಿಂದ ಪಟ್ಟಣದಲ್ಲಿ ಗಣೇಶೋತ್ಸವ ಹಬ್ಬದ ಆಚರಣೆ ವಿಜೃಂಭಣೆಯಿಂದ ನೆರವೇರಿತು.

ಬರಗಾಲದಿಂದ ಉಂಟಾದ ಆರ್ಥಿಕ ಸಂಕಷ್ಟ ಮತ್ತು ಬೆಲೆ ಏರಿಕೆಯ ಬರೆಯ ನಡುವೆಯೂ ಜನಸಮುದಾಯ ಸಾಂಪ್ರದಾಯಿಕ ಹಬ್ಬ ಆಚರಿಸಲೇಬೇಕೆಂದು ಭಾನುವಾರದಿಂದಲೇ ಹಬ್ಬಕ್ಕೆ ಪೂಜಾ ಸಾಮಗ್ರಿ, ಹಣ್ಣು-ಹಂಪಲು, ಅಲಂಕಾರಿಕ ವಸ್ತುಗಳು, ದಿನಸಿ, ಬಾಳೆ-ಕಬ್ಬು, ಗಣೇಶ ಮೂರ್ತಿಯನ್ನು ಕೊಳ್ಳುತ್ತಿರುವ ದೃಶ್ಯ ಕಂಡು ಬಂದಿತು. ತಮ್ಮದೇ ಆದ ನಂಬಿಕೆ, ಮಾಹಿತಿ ಮತ್ತು ಸರ್ಕಾರದ ಆದೇಶದಿಂದ ಬಹುತೇಕ ಸಾರ್ವಜನಿಕರು ಸೋಮವಾರ ಗಣೇಶ ಪ್ರತಿಷ್ಠಾಪನೆ ಮಾಡಿದರೆ, ಹಲವರು ಅದರಲ್ಲೂ ಸಾರ್ವಜನಿಕವಾಗಿ ಗಣೇಶ ಪ್ರತಿಷ್ಠಾಪನೆಯನ್ನು ಮಂಗಳವಾರ ಅದ್ದೂರಿಯಾಗಿ ನೆರವೇರಿಸಿದರು.

ಬಹುತೇಕ ಸಾರ್ವಜನಿಕರು ಈ ವರ್ಷ ತಮ್ಮ ಮನೆಯಲ್ಲಿ ಪರಿಸರ ಸ್ನೇಹಿ ಗಣೇಶನನ್ನು ಪ್ರತಿಷ್ಠಾಪಿಸಿದ್ದು ಕಂಡುಬಂದಿತು. ಸಾರ್ವಜನಿಕ ಗಣೇಶೋತ್ಸವ ಸಂಘಟನೆಯವರು ನಾ ಮುಂದು ತಾ ಮುಂದು ಎಂಬಂತೆ ಅಬ್ಬರದ ಡಿಜೆ ಸೌಂಡ್‌ನೊಂದಿಗೆ ಗಣೇಶ ಮೂರ್ತಿಯ ಪ್ರತಿಷ್ಠಾಪನೆ ಮಾಡಿದರು.

**ಗಣೇಶನಿಗೂ ನೀರಿನ ಬರ-ಕೃತಕ ಹೊಂಡ ನಿರ್ಮಾಣ:** ಗಣೇಶ ಪ್ರತಿಷ್ಠಾಪನೆಯಲ್ಲಿ ದಿನ ವ್ಯತ್ಯಾಸವಾದಂತೆ, ವಿಸರ್ಜನೆಯಲ್ಲೂ ವ್ಯತ್ಯಾಸ ಸಹಜ. 3ನೇ ದಿನದಿಂದಲೇ ವಿಸರ್ಜನಾ ಕಾರ್ಯ ಪ್ರಾರಂಭಗೊಳ್ಳುತ್ತದೆ. ಆದರೆ, ಈ ವರ್ಷ ಮಳೆರಾಯನ ಮುನಿಸಿನಿಂದ ಕೆರೆ, ಬಾವಿಗಳಲ್ಲಿ ನೀರಿಲ್ಲದೇ ಬರಿದಾಗಿವೆ. ಪಟ್ಟಣದ ಏಕೈಕ ಇಟ್ಟಿಗೆರೆಯಲ್ಲಿ ಅಲ್ಪ ಪ್ರಮಾಣದ ನೀರಿದ್ದರೂ ಅವು ಗಲೀಜಿನಿಂದ ಕೂಡಿವೆ. ದೊಡ್ಡ ಗಣೇಶ ಮೂರ್ತಿಗಳು ಮುಳುಗುವುದಿಲ್ಲ. ಅಲ್ಲದೇ, ಕೆರೆಯಲ್ಲಿ ಗಣೇಶ ವಿಸರ್ಜನೆ ಮಾಡುವುದು ಬೇಡ ಎಂದು ಪುರಸಭೆ ನಿರ್ದೇಶನ ನೀಡಿದೆ.

## ಜಿಲ್ಲಾ, ರಾಜ್ಯಮಟ್ಟದಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮಗಾಂಧೀಜಿಯವರ 154 ನೇ ಜಯಂತಿ ಸಂದರ್ಭದಲ್ಲಿ ವಿದ್ಯಾರ್ಥಿ, ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಮೊದಲಾದ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಆಯೋಜಿಸಿದೆ.

ಜಿಲ್ಲಾ ಮಟ್ಟದಲ್ಲಿ ವಿಜೇತರಾದವರಿಗೆ ಪ್ರತಿ ವಿಭಾಗದಲ್ಲಿ ಪ್ರತ್ಯೇಕವಾಗಿ ಹಾಗೂ ಕ್ರಮವಾಗಿ ತಲಾ 3 ಸಾವಿರ ರೂ, 2 ಸಾವಿರ ರೂ. ಹಾಗೂ 1 ಸಾವಿರ ರೂ. ಹಾಗೂ ರಾಜ್ಯ ಮಟ್ಟದಲ್ಲಿ ವಿಜೇತರಾದವರಿಗೆ ಪ್ರತಿ ವಿಭಾಗದಲ್ಲಿ ಪ್ರತ್ಯೇಕವಾಗಿ ಹಾಗೂ ಕ್ರಮವಾಗಿ ತಲಾ 31 ಸಾವಿರ ರೂ, 21 ಸಾವಿರ ರೂ. ಹಾಗೂ 11 ಸಾವಿರ ರೂ. ನಗದು ಬಹುಮಾನ ನೀಡಲಾಗುವುದು.


**ಪ್ರೌಢ ಶಾಲಾ ವಿಭಾಗ:** 1) ನನಗೇಕೆ ಗಾಂಧೀಜಿ ಇಷ್ಟವಾಗುತ್ತಾರೆ. 2) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ 3) ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ.

ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು, ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು.

**ಪದವಿ ಪೂರ್ವ ಶಿಕ್ಷಣ ವಿಭಾಗ**

1) ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು. 2) ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ. 3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 1500 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು.

**ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ** : 1) ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು. 2) ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು. 3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. 4) ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು. ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು.



ಎಲ್ಲಾ ವಿಭಾಗಗಳ ವಿದ್ಯಾರ್ಥಿಗಳು ತಾವು ರಚಿಸಿದ ಪ್ರಬಂಧಗಳನ್ನು ತಮ್ಮ ಸಂಸ್ಥೆಗಳ ಮುಖ್ಯಸ್ಥರಿಗೆ ಗುರುತಿನ ಚೀಟಿ ಹಾಗೂ ಸಂಪರ್ಕ ವಿವರಗಳನ್ನು ಲಗತ್ತಿಸಿ ಸಲ್ಲಿಸಬೇಕು. ಪ್ರತಿ ಶಾಲೆ / ಕಾಲೇಜು / ಸ್ನಾತಕೋತ್ತರ ಪದವಿ ವಿಭಾಗಗಳ ಮುಖ್ಯಸ್ಥರು ತಮ್ಮ ಸಂಸ್ಥೆಯಲ್ಲಿನ ಆಯ್ದ ಅತ್ಯುತ್ತಮವಾದ ಮೂರು ಪ್ರಬಂಧಗಳನ್ನು ದಿ. 26-09-2023 ರೊಳಗಾಗಿ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೊಠಡಿ ಸಂಖ್ಯೆ 30, ಜಿಲ್ಲಾಡಳಿತ ಭವನ ಗದಗ ಕಚೇರಿಗಳಿಗೆ ತಲುಪಿಸಬೇಕು. ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮವೆನಿಸಿದ ಪ್ರತಿ ವಿಭಾಗದಲ್ಲಿನ ಮೂರು (3) ಪ್ರಬಂಧಗಳನ್ನು ಆಯ್ಕೆ ಮಾಡಿ ಜಿಲ್ಲಾ ವಾರ್ತಾಧಿಕಾರಿಗಳು ದಿನಾಂಕ : 29-09-2023 ರೊಳಗೆ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು, ಇವರಿಗೆ ಸಲ್ಲಿಸುವರು. ಅವುಗಳಲ್ಲಿ ಅತ್ಯುತ್ತಮವಾದ ಪ್ರಬಂಧಗಳಿಗೆ ರಾಜ್ಯಮಟ್ಟದಲ್ಲಿ ಬಹುಮಾನ ನೀಡಲಾಗುವುದು. ಪ್ರಬಂಧ ರಚಿಸಲು ಮಾರ್ಗಸೂಚಿಗಳು ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಪ್ರಬಂಧವು ಕನ್ನಡದಲ್ಲಿ ಶುದ್ಧ ಕೈಬರಹ ಅಥವಾ ನುಡಿ ಇಲ್ಲವೇ ಯುನಿಕೋಡ್ ತಂತ್ರಾಂಶದಲ್ಲಿ ಬೆರಳಚ್ಚು ಮಾಡಿರಬೇಕು. ಆಕರವಾಗಿ ಬಳಸಿದ ಪರಾಮರ್ಶನ / ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು.

ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಶಾಲೆ/ ಕಾಲೇಜುಗಳ ಮುಖ್ಯಸ್ಥರುಗಳ ಮೂಲಕವೇ ಜಿಲ್ಲಾ ವಾರ್ತಾಧಿಕಾರಿಗಳಿಗೆ ಪ್ರಬಂಧಗಳನ್ನು ತಲುಪಿಸಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

## ಸೆ.26ರಂದು ಹಿರಿಯ ನಾಗರಿಕರಿಗೆ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಟೋಬರ್ 1 ರಂದು ವಿಶ್ವ ಹಿರಿಯ ನಾಗರಿಕ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ತನ್ನಿಮಿತ್ತ ಜಿಲ್ಲಾ ಮಟ್ಟದಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಗದಗ ಜಿಲ್ಲೆಯ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಸೆಪ್ಟೆಂಬರ್ 26 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ. ಹೆಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಸಲಾಗುವುದು.

ಸ್ಪರ್ಧೆಗಳಲ್ಲಿ ಭಾಗ ವಹಿಸಲಿಚ್ಚಿಸುವ ಹಿರಿಯ ನಾಗರಿಕರು ತಮ್ಮ ಹಿರಿಯ ನಾಗರಿಕರ ಗುರುತಿನ ಚೀಟಿ ಅಥವಾ ವಯಸ್ಸಿನ ಆಧಾರ ಕಾರ್ಡ್ ಹಾಗೂ ಒಂದು ಫೋ-ಟೊ ದಾಖಲಾತಿಗಳೊಂದಿಗೆ ಹೆಸರನ್ನು ಸೆಪ್ಟೆಂಬರ್ 25 ರಂದು ಸಂಜೆ 5:00 ಗಂಟೆಯೊಳಗಾಗಿ ಕೆಳಕಂಡವರಲ್ಲಿ ನೊಂದಾಯಿಸಲು ಹಾಗೂ ನೇರವಾಗಿ ಸ್ಪರ್ಧೆಗಳು ನಡೆಯುವ ದಿನಾಂಕದಂದು ನೊಂದಾಯಿಸಬಹುದಾಗಿದೆ.

ಶ್ರೀ ಸಿದ್ಧೇಶ್ವರ ವಿಧ್ಯಾಪೀಠ (ರಿ) ಗದಗ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಎಸ್.ಪಿ. ಕಚೇರಿ, ಗದಗ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಎಸ್.ಪಿ. ಕಚೇರಿ,ಗದಗ ಗಿರಿಜಾ-9606356439 ; ಜಿ.ಎಫ್. ಉಪನಾಳ ಟ್ರಸ್ಟ್ (ರಿ), ಶಾಂತಿದಾಮ ವೃದ್ಧಾಶ್ರಮ, ಲಕ್ಷ್ಮೇಶ್ವರ ಸುನಿತಾ-8495897102, ಜೀವನಜ್ಯೋತಿ ಸೇವಾ ಸಂಸ್ಥೆ (ರಿ), ಜೀವನಜ್ಯೋತಿ ವೃದ್ಧಾಶ್ರಮ, ಬೆಟಗೇರಿ. ಮಂಜುಳಾ-7026793946, ಸುರಭಿ ವೃದ್ಧಾಶ್ರಮ, ಹುಲಕೋಟಿ, ರಾಜೇಸಾಬ-7259339092, ಜೀವನಜ್ಯೋತಿ ಸೇವಾ ಸಂಸ್ಥೆ (ರಿ), ಜೀವನಜ್ಯೋತಿ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ, ಬೆಟಗೇರಿ ಮೆಹಬೂಬಿ-6360545980, ಎಮ್.ಆರ್. ಡಬ್ಲ್ಯೂ ತಾ.ಪಂ .ಗದಗ-8867556465,ಎಮ್.ಆರ್. ಡಬ್ಲ್ಯೂ ಮುಂಡರಗಿ ತಾ.ಪಂ-9611922445,ಎಮ್.ಆರ್. ಡಬ್ಲ್ಯೂ ಶಿರಹಟ್ಟಿ-8951128679 , ಎಮ್.ಆರ್.ಡಬ್ಲ್ಯೂ ತಾ.ಪಂ. ರೋಣ-9741615926, ಎಮ್.ಆರ್.ಡಬ್ಲ್ಯೂ ತಾ.ಪಂ ನರಗುಂದ-9591679027 ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ-ಸಂಸ್ಥೆಗಳು ಇವರಲ್ಲಿ ನೊಂದಾಯಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08372-220419, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ:29 ಜಿಲ್ಲಾ ಆಡಳಿತ ಭವನ, ಗದಗ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾದಿಕಾರಿ ಕೆ.ಮಹಾಂತೇಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಿರಿಯ ನಾಗರಿಕರಿಗೆ ಏರ್ಪಡಿಸಲಾಗುವ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು

**ಕ್ರೀಡಾ ಸ್ಪರ್ಧೆಗಳು:** ಪುರುಷರು ಹಾಗೂ ಮಹಿಳೆಯರಿಗಾಗಿ ಪ್ರತ್ಯೇಕವಾಗಿ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ.

60-69, 70-79 ಹಾಗೂ 80 ವರ್ಷ ಮೇಲ್ಪಟ್ಟವರಿಗೆ ಎಂದು ವಿಭಾಗಿಸಲಾಗಿದೆ. ನಡಿಗೆ, ರಿಂಗ್‌ನ್ನು ಬಕೆಟ್ ನಲ್ಲಿ ಎಸೆಯುವುದು, ಮ್ಯೂಸಿಕಲ್ ಚೇರ್ಸ್ ಕ್ರೀಡೆಗಳನ್ನು ಆಯೋಜಿಸಲಾಗಿದೆ.

**ಸಾಂಸ್ಕೃತಿಕ ಸ್ಪರ್ಧೆಗಳು:**ಪುರುಷರು ಹಾಗೂ ಮಹಿಳೆಯರಿಗಾಗಿ ಪ್ರತ್ಯೇಕವಾಗಿ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ.

60-69, 70-79 ಹಾಗೂ 80 ವರ್ಷ ಮೇಲ್ಪಟ್ಟವರಿಗೆ ಎಂದು ವಿಭಾಗಿಸಲಾಗಿದೆ. ಏಕಪಾತ್ರ ಅಭಿನಯ, ಗಾಯನ ಸ್ಪರ್ಧೆ, ಚಿತ್ರಕಲೆ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಿದ ಹಿರಿಯ ನಾಗರಿಕರು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ ಹಾಗೂ ಸಾಂಸ್ಕೃತಿಕ ಚಿತ್ರಕಲೆ ಸ್ಪರ್ಧೆಯಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ಬಣ್ಣಗಳನ್ನು(ಬಣ್ಣದ ಬಾಕ್ಸ್ ಗಳನ್ನು) ತಾವೇ ತರಬೇಕು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಪತ್ರಿಕಾಗೋಷ್ಠಿಯಲ್ಲಿ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ.ಪಾಟೀಲ ಹೇಳಿಕೆ

# ವಿಶ್ವ ಪಾರಂಪರಿಕ ತಾಣವಾಗಿ ಬೇಲೂರು, ಹಳೆಬೀಡು, ಸೋಮನಾಥಪುರ ದೇಗುಲಗಳು ಸೇರ್ಪಡೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಐತಿಹಾಸಿಕ ಮತ್ತು ಕಲೆ-ಸಂಸ್ಕೃತಿಯ ಪ್ರತೀಕವಾಗಿರುವ 12 ಮತ್ತು 15ನೇ ಶತಮಾನಗಳಲ್ಲಿ ನಿರ್ಮಾಣಗೊಂಡಿರುವ ಹಾಸನ ಜಿಲ್ಲೆಯ ಬೇಲೂರು, ಹಳೆಬೀಡು ಮತ್ತು ಮೈಸೂರು ಜಿಲ್ಲೆಯ ಸೋಮನಾಥಪುರ ದೇಗುಲಗಳಿಗೆ ಜಾಗತಿಕ ಮನ್ನಣೆ ದೊರೆತಿ-ದ್ದು, ಯುನೆಸ್ಕೊ ಈ ಮೂರು ದೇಗುಲಗಳನ್ನು ವಿಶ್ವ ಪಾರಂಪರಿಕ ತಾಣ ಎಂದು ಘೋಷಣೆ ಮಾಡಿದೆ ಎಂದು ಪ್ರವಾಸೋದ್ಯಮ ಸಚಿವ ಡಾ.ಎಚ್.ಕೆ.ಪಾಟೀಲ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಮಂಗಳವಾರದಂದು ಜರುಗಿದ ಪತ್ರಿಕಾಗೋಷ್ಟಿಯಲ್ಲಿ ಅವರು ಮಾತನಾಡಿದರು.

ಸಂಪದ್ಭರಿತ ಕರ್ನಾಟಕ ರಾಜ್ಯದ ಸಂಸ್ಕೃತಿ- ಪರಂಪರೆ ಹಿರಿತನಕ್ಕೆ ಮತ್ತು ರಾಜ್ಯ ಸರ್ಕಾರದ ಸತತ ಪರಿಶ್ರಮದ ಫಲವಾಗಿ ರಾಜ್ಯದ ಈ ಮೂರು ದೇಗುಲಗಳ ಕಲೆ ಮತ್ತು ಪರಂಪರೆಯನ್ನು ಯುನೆಸ್ಕೊ ಗುರುತಿಸಿದೆ. ಈ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಯುನೆಸ್ಕೊ ಮನ್ನಣೆ ಸಹಕಾರಿ ಆಗಲಿದೆ ಎಂದರು.



ಜಾಗತಿಕ ಪಟ್ಟಿಯಲ್ಲಿ ಸ್ಥಾನ ಪಡೆದುಕೊಂಡಿರುವ ಬೆಳವಣಿಗೆಯಿಂದಾಗಿ ಈ ದೇಗುಲಗಳಿಗೆ ಭೇಟಿ ನೀಡುವವರ ಸಂಖ್ಯೆ ಹೆಚ್ಚಾಗಲಿದೆ. ಇದರಿಂದ ಸ್ಥಳೀಯ ಕರಕುಶಲ ಮತ್ತು ಗುಡಿ ಕೈಗಾರಿಕೆ ಉತ್ಪನ್ನಗಳಿಗೆ ಮಾರುಕಟ್ಟೆ ದೊರಕುವ ಜೊತೆಗೆ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಗೆ ಅವಕಾಶ ಮಾಡಿಕೊಡಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರವೂ ಸಹ ಈ ವ್ಯಾಪ್ತಿಯಲ್ಲಿ ಪ್ರವಾಸಿಗರಿಗೆ ಹೆಚ್ಚಿನ ಮೂಲಭೂತ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಮುಂದಡಿ ಇರಿಸಲಿದೆ ಎಂದು ತಿಳಿಸಿದರು.

ಸೋಮವಾರ ಸೌದಿ ಅರೇಬಿಯಾದ ರಾಜಧಾನಿ ರಿಯಾದ್‌ನಲ್ಲಿ ನಡೆದ ಯುನೆಸ್ಕೊ 45ನೇ ಸರ್ವ ಸದಸ್ಯರ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದ್ದು, 2014ರಲ್ಲಿ ಆಯ್ಕೆ ಪಟ್ಟಿಗೆ ಈ ದೇಗುಲಗಳನ್ನು ಸೇರ್ಪಡೆಗೊಳಿಸಲಾಗಿತ್ತು. 2018ರಲ್ಲಿ ಭಾರತೀಯ ಪುರಾತತ್ವ ಇಲಾಖೆಗೆ (ಎಎಸ್‌ಐ)ಗೆ ರಾಜ್ಯ ಸರ್ಕಾರವು ಈ ದೇಗುಲಗಳ ಬಗ್ಗೆ ಸವಿಸ್ತಾರ ಮಾಹಿತಿ ನೀಡಿತ್ತು.



ಈ ಬೆಳವಣಿಗೆಗಳ ನಂತರ 2022ರಲ್ಲಿ ಅಂತಾರಾಷ್ಟ್ರೀಯ ಪುರಾತನ ಸ್ಮಾರಕ ಮತ್ತು ಪ್ರದೇಶಗಳ ಸಮಿತಿಯು ಇಲ್ಲಿಗೆ ಭೇಟಿ ನೀಡಿ, ಈ ದೇಗುಲಗಳ ಹಿರಿಮೆ ಬಗ್ಗೆ ಯುನೆಸ್ಕೋಗೆ ವರದಿ ನೀಡಿತ್ತು. ಬೇಲೂರು, ಹಳೆಬೀಡು ಮತ್ತು ಸೋಮನಾಥಪುರ ದೇಗುಲಗಳ ಬಗ್ಗೆ ಸಲ್ಲಿಕೆಯಾಗಿದ್ದ ವರದಿಯನ್ನು ಆಧರಿಸಿ ಸೋಮವಾರ ನಡೆದ ಯುನೆಸ್ಕೊ ಸಭೆಯಲ್ಲಿ ಭಾರತವೂ ಸೇರಿದಂತೆ 21 ದೇಶಗಳು ಈ ದೇಗುಲಗಳನ್ನು ವಿಶ್ವ ಪಾರಂಪರಿಕ ತಾಣ ಪಟ್ಟಿಗೆ ಸೇರ್ಪಡೆ ಮಾಡಲು ಸರ್ವಾನುಮತದ ನಿರ್ಧಾರ ಕೈಗೊಂಡಿರುವುದು ಸಂತಸ ತಂದಿದೆ.

ಬೇಲೂರು, ಹಳೆಬೀಡು, ಸೋಮನಾಥಪುರ ದೇಗುಲಗಳು ಯುನೆಸ್ಕೋ ಪಟ್ಟಿಗೆ ನಾಲ್ಕನೇ ತಾಣವಾಗಿ ಸೇರ್ಪಡೆಗೊಂಡಿವೆ. ಈಗಾಗಲೇ ರಾಜ್ಯದ ಪಶ್ಚಿಮಘಟ್ಟ ಪ್ರದೇಶ, ಹಂಪಿ, ಪಟ್ಟದಕಲ್ಲು ಈ ಪಟ್ಟಿಯಲ್ಲಿ ಸ್ಥಾನ ಪಡೆದುಕೊಂಡಿವೆ ಎಂದು ಮಾಹಿತಿ ನೀಡಿದರು.

ಕರುನಾಡಿನ ಅಂದಿನ ಕಲೆ-ಸಂಸ್ಕೃತಿಯ ಸಿರಿವಂತಿಕೆ ಮತ್ತು ಸರ್ಕಾರದ ಸತತ ಪರಿಶ್ರಮದ ಪರಿಣಾಮ 12 ಮತ್ತು 15ನೇ ಶತಮಾನದಲ್ಲಿ ಹೊಯ್ಸಳರ ವಿಷ್ಣುವರ್ಧನರ ಕಾಲದಲ್ಲಿ ನಿರ್ಮಾಣಗೊಂಡಿರುವ ಈ ಮೂರು ದೇಗುಲಗಳುನ್ನು ಮೃದು ಕಲ್ಲಿನಲ್ಲಿ ನಿರ್ಮಾಣವಾಗಿದೆ. ಇದರ ಕೆತ್ತನೆ ಅಂದಿನ ಕಲೆ- ಸಂಸ್ಕೃತಿ ಮತ್ತು ಪರಂಪರೆಗೆ ಹಿಡಿದ ಕನ್ನಡಿಯಂತಿದೆ.

ಇದೀಗ ಈ ಕಲೆ- ಪರಂಪರೆ ಜಾಗತಿಕ ಮಟ್ಟಕ್ಕೆ ತಲುಪಲಿದ್ದು, ಇದರಿಂದ ಈ ಮೂರೂ ದೇಗುಲಗಳು ಜಾಗತಿಕ ಪ್ರವಾಸಿ ತಾಣವಾಗಲಿದೆ. ಈ ಮೂರು ದೇಗುಲಗಳಿಗೆ ಯುನೆಸ್ಕೊ ಸ್ಥಾನಮಾನ ದೊರತಿರುವ ಪರಿಣಾಮ ಜಾಗತಿಕ ಮಟ್ಟದ ಪ್ರವಾಸಿಗರು ಇಲ್ಲಿಗೆ ಭೇಟಿ ನೀಡಲಿದ್ದಾರೆ. ಹೀಗಾಗಿ ಯೋಜನಾಬದ್ಧ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಲಿದೆ. ಈ ಬೆಳವಣಿಗೆಯಿಂದ ಸ್ಥಳೀಯರಿಗೂ ಹೆಚ್ಚಿನ ಅನುಕೂಲ ಆಗಲಿದೆ ಎಂದರು.

ಕನ್ನಡ ನಾಡಿನ ಕಲೆ- ಸಂಸ್ಕೃತಿ, ಪರಂಪರೆಯನ್ನು ನಾಡಿನಾದ್ಯಂತ ಬಿಂಬಿಸುವಲ್ಲಿ ಬೇಲೂರು, ಹಳೆಬೀಡು, ಸೋಮನಾಥಪುರ ದೇಗುಲಗಳ ಪಾತ್ರ ಪ್ರಮುಖವಾದುದು, ಈ ದೇಗುಲಗಳಿಗೆ ಈ ಹಿಂದೆಯೇ ಜಾಗತಿಕ ಮಟ್ಟದ ಹಿರಿಮೆ ಸಿಗಬೇಕಿತ್ತು. ತಡವಾಗಿಯಾದರೂ ಈಗ ಯೂನೆಸ್ಕೋ ಈ ದೇಗುಲಗಳ ಹಿರಿಮೆಯನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಪ್ರಯತ್ನ ನಡೆಸಿರುವುದು ಶ್ಲಾಘನೀಯ, ಇದಕ್ಕೆ ಕಾರಣರಾದ ಪ್ರವಾಸೋದ್ಯಮ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳಾದ ಕಪಿಲ್ ಮೋಹನ್, ಪ್ರವಾಸೊದ್ಯಮ ಇಲಾಖೆ ನಿರ್ದೇಶಕರಾದ ರಾಮಪ್ರಸಾದ ಮನೋಹರ, ಪುರಾತತ್ವ ಇಲಾಖೆ ಆಯುಕ್ತರಾದ ದೇವರಾಜ ಇವರ ನೇತೃತ್ವದ ಅಧಿಕಾರಿಗಳ ಪರಿಶ್ರಮದ ಫಲವಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಈ ಜಾಗತಿಕ ಮನ್ನಣೆಗೆ ಶ್ರಮಿಸಿದ ಅಧಿಕಾರಿಗಳಿಗೆ, ಯುನೆಸ್ಕೋಗೆ ಹಾಗೂ ರಾಜ್ಯದ ಜನತೆಗೆ ಅಭಿನಂದನೆಗಳು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಹೇಳಿದರು.

ಪತ್ರಿಕಾಗೋಷ್ಟಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹಾಗೂ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka